ಸಂಪುಟ : 9 ಸಂಚಿಕೆ 72 ಪುಟ : 4 ಬೆಲೆ: 3.00 ಶುಕ್ರವಾರ ಎಪ್ರಿಲ್ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 72 Pages : 4 Price : 3.00 Friday April 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಬಾಗಲಕೋಟ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತ ಪಾಟೀಲ ಪರ ಬಹಿರಂಗ ಪ್ರಚಾರ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ರಾಜ್ಯದ ಪಂಚ ಗ್ಯಾರಂಟಿಯಿಂದ ಮಹಿಳೆಯರಿಗೆ ಬಲ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ರಾಜ್ಯದಲ್ಲಿ ಸಿಎಂ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಮಹಿಳೆಯರಿಗೆ ಬಲ ಬಂದಿದ್ದು, ಲಕ್ಷ್ಮೀಯರನ್ನು ಮಹಾಲಕ್ಷ್ಮೀಯರನ್ನಾಗಿ ಮಾಡಲು ಕೇಂದ್ರದಿಂದ ವರ್ಷಕ್ಕೆ 1 ಲಕ್ಷ ರೂ. ನೀಡುವುದಾಗಿ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ನೀಡಿ ಮತ್ತಷ್ಟು ಬಲ ತುಂಬಲಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ ಭರವಸೆ ನೀಡಿದರು.

ಇಲ್ಲಿಯ ಬಜಾರ ರಸ್ತೆಯಲ್ಲಿ ಬಾಗಲಕೋಟ ಲೋಕಸಭಾ ಮತ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತ ಪಾಟೀಲ ಅವರ ಪರ ಹಮ್ಮಿಕೊಂಡಿದ್ದ ಬಹಿರಂಗ ಪ್ರಚಾರ ಸಭೆಯನ್ನು ಉದ್ದೇಶಿಸಿ ಸಚಿವರು ಮಾತನಾಡಿದರು.

ಸಿದ್ಧರಾಮಯ್ಯ ಅವರು ರಾಜ್ಯದಲ್ಲಿ ಕ್ರಾಂತಿಕಾರಕ ಬದಲಾವಣೆಗಳನ್ನು ತಂದಿದ್ದು, ಮಹಿಳೆಯರ ಸಬಲೀಕರಣಕ್ಕಾಗಿ ಗೃಹಲಕ್ಷ್ಮೀ ಯೋಜನೆಯಲ್ಲಿ ಪ್ರತಿ ತಿಂಗಳು 2000 ರೂ. ಜಮಾ ಮಾಡುತ್ತಿದ್ದೇವೆ. ಪ್ರತಿ ಬಡ ಕುಟುಂಬದ ಮಹಿಳೆಯರನ್ನು ಪ್ರಾಮಾಣಿಕವಾಗಿ ತಲುಪಲು ಅನುಷ್ಠಾನ ಸಮಿತಿ ರಚಿಸಲಾಗಿದ್ದು, ಜಿಲ್ಲೆಯ ಶೇ 99.16 ಮಹಿಳೆಯರಿಗೆ ಈವರೆಗೆ ಯೋಜನೆ ತಲುಪಿದೆ. ಲಕ್ಷ್ಮೀಯರನ್ನು ಮಹಾಲಕ್ಷ್ಮೀಯರನ್ನಾಗಿಸಲು ರಾಹುಲ್ ಗಾಂಧಿ ಕೇಂದ್ರದಿಂದ ಪ್ರತಿ ವರ್ಷ 1 ಲಕ್ಷ ರೂ ನೀಡುವುದಾಗಿ ಗ್ಯಾರಂಟಿ ಘೋಷಿಸಿದ್ದಾರೆ. ಉಚಿತ ಬಸ್ ಪ್ರಯಾಣದ ಶಕ್ತಿ ಯೋಜನೆಯು ಮಹಿಳೆಯರಲ್ಲಿ ಬಲ ತುಂಬಿದೆ ಎಂದರು.

ಅಭ್ಯರ್ಥಿ ಸಂಯುಕ್ತಾ ಪಾಟೀಲ ಮಾತನಾಡಿ, ಇದು ರಾಜ್ಯದ ರೈತರ, ಮಹಿಳೆಯರ ಪ್ರತಿಷ್ಠೆಯ ಚುನಾವಣೆಯಾಗಿದ್ದು, 2 ಬರಗಾಲದ ಸನ್ನಿವೇಶದಲ್ಲಿ ಸುಮಾರು 35 ಸಾವಿರ ಕೋಟಿ



ಪಂಚ ಉಚಿತ ಯೋಜನೆಗಳು ಅನುಷ್ಠಾನಗೊಂಡರೆ ದೇಶ ದಿವಾಳಿಯಾಗುತ್ತದೆ ಎಂದು ಪ್ರಧಾನಿ ಮೋದಿಯವರು ಹೇಳಿದ್ದರು. ಆದರೆ ಶ್ರೀಮಂತರ ಸಾಲ ಮನ್ನಾ ಮಾಡಿದರೆ ದೇಶ ದಿವಾಳಿಯಾಗುತ್ತದೆ ಎಂದ ಸಚಿವರು, ಎನ್‌ಡಿಎ ಸರಕಾರ 10 ವರ್ಷ ಸುಳ್ಳು ಹೇಳಿ ಅಧಿಕಾರ ನಡೆಸಿದೆ. ಇದೆಲ್ಲವನ್ನೂ ಮತದಾರರು ಅರಿತು, ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಅವರಿಗೆ ಮತ ನೀಡಬೇಕು ಎಂದು ಸಚಿವ ಎಚ್.ಕೆ. ಪಾಟೀಲ ವಿನಂತಿಸಿಕೊಂಡರು.

ರೂ ಹಾನಿಯಾಗಿದೆ. ಇದರಲ್ಲಿ 18 ಸಾವಿರ ಕೋಟಿ ರೂ ಕೊಡಬೇಕು ಎಂದು ಮನವಿ ಮಾಡಿದರೂ ಸಹ ಕೇಂದ್ರ ಸರಕಾರ ಯಾವುದೇ ಅನುದಾನ ನೀಡದೇ ರೈತ ವಿರೋಧಿ ನೀತಿಯನ್ನು ಅನುಸರಿಸಿದೆ. 2014ರಿಂದ 2024ರವರೆಗೆ ದೇಶದ ಉದ್ದಿಮೆಗಳ 14 ಲಕ್ಷ ಕೋಟಿ ರೂ ಸಾಲವನ್ನು ಮನ್ನಾ ಮಾಡಿದ್ದರೂ, ಈ ದೇಶದ ಬೆನ್ನೆಲುಬಾಗಿರುವ ರೈತರ ಸಾಲ ಮನ್ನಾ ಮಾಡಲಿಲ್ಲ. 4 ವರ್ಗದ ಬಗ್ಗೆ ಮಾತನಾಡುವ ಕೇಂದ್ರ ಸರಕಾರ ರೈತ, ಯುವಕ, ಮಹಿಳೆ ಮತ್ತು ಬಡವರ ಬಗ್ಗೆ ನಿಷ್ಕಾಳಜಿ ವಹಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ ಕೇಂದ್ರ ಸರಕಾರದ ಬಡವರ ವಿರೋಧಿ ನೀತಿಯನ್ನು ಖಂಡಿಸಿದರು. ಬಿಜೆಪಿ ಮುಖಂಡರಾದ ಅಜ್ಜಪ್ಪಗೌಡ ಪಾಟೀಲ, ಗ್ರಾ.ಪಂ ಮಾಜಿ ಸದಸ್ಯ ಶಿವನಗೌಡ ಗೌಡ್ರ, ಶ್ರೀಶೈಲಪ್ಪ ಹಗರಿ ಕಾಂಗ್ರೆಸ್‌ಗೆ ಸೇರ್ಪಡೆಯಾದರು. ಲಕ್ಕುಂಡಿ ಯುವ ಕಾಂಗ್ರೆಸ್ ವತಿಯಿಂದ ಸಂಯುಕ್ತಾ ಪಾಟೀಲರನ್ನು ಸನ್ಮಾನಿಸಲಾಯಿತು. ಹಾಲುಮತ ಸಮಾಜದಿಂದ ಕಂಬಳಿಯನ್ನು ಹೊದೆಸಿ ಗೌರವಿಸಿದರು.

ಇದಕ್ಕೂ ಮುನ್ನ ಅತ್ತಿಮಬ್ಬೆ ಮಹಾದ್ವಾರದಿಂದ ಅಭ್ಯರ್ಥಿ ಸಂಯುಕ್ತಾ ಪಾಟೀಲ, ಸಚಿವ ಎಚ್.ಕೆ. ಪಾಟೀಲ, ಸಿದ್ದು ಪಾಟೀಲ ಅವರು ರೋಡ್ ಶೋ ಮೂಲಕ ಮತಯಾಚನೆ ಮಾಡಿದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವಿವೇಕ ಯಾವಗಲ್, ವಿಧ್ಯಾಧರ ದೊಡ್ಡಮನಿ, ಪ್ರಕಾಶ ಕರಿ, ನೀಲಮ್ಮ ಬೋಳನವರ ಗ್ರಾ.ಪಂ ಸದಸ್ಯರು ಉಪಸ್ಥಿತರಿದ್ದರು. ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಸ್ವಾಗತಿಸಿದರು. ನಜೀರಅಹ್ಮದ ಕಿರೀಟಗೇರಿ ನಿರೂಪಿಸಿ ವಂದಿಸಿದರು.



## ಮಾನವ ಸರಪಳಿ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಗೆ ಸಂಬಂಧಿಸಿ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಮೇ 7ರಂದು ಮತದಾನ ಜರುಗಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವಂತೆ ಪ್ರೇರೇಪಿಸುವ ಉದ್ದೇಶದಿಂದ ಜಿ.ಪಂ ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರ ನಿರ್ದೇಶನದಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸ್ವೀಪ್ ಕಾರ್ಯಕ್ರಮವಾಗಿ ಏಪ್ರಿಲ್ 19ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಯುವ ಮತದಾರರಿಂದ ಮತದಾನದ ಜಾಗೃತಿ ನಿಮಿತ್ತ ಮಾನವ ಸರಪಳಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಜಿಲ್ಲೆಯಲ್ಲಿನ ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು, ಬಿ.ಇಡಿ ಕಾಲೇಜು ವಿದ್ಯಾರ್ಥಿಗಳು, ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ಎನ್‌ಸಿಸಿ ವಿದ್ಯಾರ್ಥಿಗಳು, ಯುವ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ವಿನಂತಿಸಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಗದಗ ಜಿಲ್ಲೆಯ ಚುನಾವಣಾ ರಾಯಭಾರಿಗಳು ಭಾಗವಹಿಸಲಿದ್ದಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 'ಅಪರಾಧ ತಡೆ ಮಾಸಾಚರಣೆ' ಕಾರ್ಯಕ್ರಮದಲ್ಲಿ ಪಿಎಸ್ಐ ಸುಮಾ ಎಮ್.ಗೊರಬಾಳ

# ಅಪರಾಧ ತಡೆಗೆ ಇಲಾಖೆಯೊಂದಿಗೆ ಸಹಕರಿಸಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮೀಣ ಪ್ರದೇಶಗಳಲ್ಲಿಯೂ ಬೈಕ್ ಕಳ್ಳತನ, ಮನೆ, ಅಂಗಡಿಗಳ ಕಳ್ಳತನ, ಸರಗಳ್ಳತನ ಸೇರಿದಂತೆ ವಿವಿಧ ಅಪರಾಧ ಪ್ರಕರಣಗಳ ಮೂಲಕ ಸಾರ್ವಜನಿಕರು ವಂಚನೆಗೆ ಒಳಗಾಗುತ್ತಿರುವುದು ಗಣನೀಯವಾಗಿ ಹೆಚ್ಚಳವಾಗುತ್ತಿವೆ. ಇವುಗಳನ್ನು ತಡೆಯಲು ಇಲಾಖೆ ಈಗಾಗಲೇ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಿದೆ. ಸಿಗ್ನಲ್ ಜಂಪ್, ವಾಹನ ಚಾಲಕರಿಂದ ದುಡುಕಿನ ಚಾಲನೆ ಪ್ರಕರಣಗಳು ನಡೆಯುತ್ತಿವೆ. ಸಾರ್ವಜನಿಕರು ಸಿಸಿಟಿವಿ ಕ್ಯಾಮರಾ ಅಳವಡಿಸಿಕೊಂಡು ಸುರಕ್ಷಿತವಾಗಿರಬೇಕೆಂದು ಮುಂಡರಗಿ ಪಿಎಸ್ಐ ಸುಮಾ ಎಮ್.ಗೊರಬಾಳ ಹೇಳಿದರು.

ಡಂಬಳ ಗ್ರಾಮದ ಡಾ. ಬಿ.ಆರ್. ಅಂಬೇಡ್ಕರ ನಗರದಲ್ಲಿ ಗುರುವಾರ 'ಅಪರಾಧ ತಡೆ ಮಾಸಾಚರಣೆ'ಯಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಮಾತನಾಡಿದ ಅವರು, ಚಾಲಕರ ಪಕ್ಕದಲ್ಲಿ ಪ್ರಯಾಣಿಕರನ್ನು ಕೂರಿಸಿಕೊಳ್ಳುವುದು, ನಿರ್ಲಕ್ಷ್ಯದಿಂದ ಚಾಲನೆ ಮಾಡುವುದು, ಹೆಲ್ಮೆಟ್ ಧರಿಸದೇ ಇರುವುದು, ಸಿಗ್ನಲ್ ಬ್ರೇಕ್ ಮಾಡುವುದು ಸೇರಿದಂತೆ ಸಂಚಾರ ನಿಯಮಗಳನ್ನು ಪಾಲನೆಯಾಗುತ್ತಿಲ್ಲ. ಮನೆ ಕಳ್ಳತನ ತಡೆಗಟ್ಟುವ



ಬಗ್ಗೆ ಪಾಲಿಸಬೇಕಾದ ಕ್ರಮಗಳು, ಮನೆ ಬಾಡಿಗೆ ನೀಡುವಾಗ ಪಾಲಿಸಬೇಕಾದ ಕ್ರಮಗಳು, ವಾಹನ ಕಳ್ಳತನ ತಡೆಗಟ್ಟಲು ಪಾಲಿಸಬೇಕಾದ ಕ್ರಮಗಳನ್ನು ಗಮನದಲ್ಲಿರಿಸಿಕೊಂಡು ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು.

ಯಾವುದೇ ತುರ್ತು ಪರಿಸ್ಥಿತಿಗಳಲ್ಲಿ 112ಗೆ ಕರೆ ಮಾಡಿ ಪರಿಹಾರ ಕಂಡುಕೊಳ್ಳಬೇಕು. ನಿತ್ಯ ನಡೆಯುವ ಅಪರಾಧಗಳ ನಿಯಂತ್ರಣಕ್ಕೆ ನಮ್ಮ ಪೊಲೀಸ್ ಇಲಾಖೆಯೊಂದಿಗೆ ಸಾರ್ವಜನಿಕರು ಕೈಜೋಡಿಸಬೇಕು. ತಮ್ಮ ಬಡಾವಣೆಯಲ್ಲಿ ಅಕ್ರಮ ಚಟುವಟಿಕೆಗಳು ನಡೆಯದಂತೆ ಜಾಗೃತೆ ವಹಿಸಬೇಕು. ಪಾಲಕರು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಜಾಗೃತೆ ವಹಿಸಬೇಕೆಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಎಎಸ್ಐ ವೀರಭದ್ರಪ್ಪ ತಂತ್ರೆ, ಮುಖಂಡ ನಿಂಗಪ್ಪ ಮಾದರ, ಸೋಮಪ್ಪ ತಳಗೇರಿ, ಕೆಂಚಪ್ಪ ಹಳ್ಳಿಕೇರಿ, ಮರಿಯಪ್ಪ ದೊಡ್ಡಮನಿ, ಸುರೇಶ ದೊಡ್ಡಮನಿ, ಶ್ರೀಕಾಂತ ಪೂಜಾರ, ಕೆಂಚಪ್ಪ ಪೂಜಾರ, ಕೆಂಚಪ್ಪ ದೊಡ್ಡಮನಿ, ದುರಗಮ್ಮ ತಳಗೇರಿ, ಮರಿಯಪ್ಪ ದೊಡ್ಡಮನಿ, ದೇವಪ್ಪ ಬೆನ್ನಹಳ್ಳಿ, ಗೋವಿಂದಪ್ಪ ಘಟ್ಟರಡ್ಡಿಹಾಳ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಇದ್ದರು.

## ತೋಂಟದಾರ್ಯ ತೇರಿನ ಕಳಸಾರೋಹಣ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ನಿಮಿತ್ತ ತೇರಿನ ಕಳಸಾರೋಹಣ ಏ.19ರ ರಾತ್ರಿ 8 ಗಂಟೆಗೆ ಪರಮಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸನ್ನಿಧಿಯಲ್ಲಿ ನೆರವೇರಲಿದೆ.

ಶ್ರೀಸ್ವಾಮಿ ಸಿದ್ಧಲಿಂಗೇಶ್ವರರ ಭಕ್ತರು, ಶ್ರೀಮಠದ ಅಭಿಮಾನಿಗಳು, ಜಾತ್ರಾ ಸಮಿತಿಯ ಪದಾಧಿಕಾರಿಗಳು ಹಾಗೂ ಉಪಸಮಿತಿಗಳ ಪದಾಧಿಕಾರಿಗಳು, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಸರ್ವಸದ್ಭಕ್ತ ಮಹಾಜನತೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರು, ಕಾರ್ಯದರ್ಶಿ ಪ್ರವೀಣ ವಾರಕರ ಮತ್ತು ಸರ್ವ ಪದಾಧಿಕಾರಿಗಳು ವಿನಂತಿಸಿದ್ದಾರೆ.

## ತೋಂಟದಾರ್ಯ ವಿದ್ಯಾರ್ಥಿಗಳು ಪೆಂಟಗನ್ ಸ್ಪೇಸ್ ಕಂಪನಿಗೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಪೆಂಟಗನ್ ಸ್ಪೇಸ್ ಪ್ರೈ. ಲಿ ಕಂಪನಿಯು ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದಲ್ಲಿ ನಡೆಸಿದ ಕ್ಯಾಂಪಸ್ ಸಂದರ್ಶನದಲ್ಲಿ ಮಹಾವಿದ್ಯಾಲಯದ 10 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ಭಾವನಾ ವೈಷ್ಣವಿ, ವೈಷ್ಣವಿ ಕತ್ತಿಕಾಳ, ಫಕ್ರುದ್ದೀನ ತೊಪ್ಪಲದ, ನಿದಾಕೌಸರ್ ಸನದಿ, ದೀಪಾ ಬ್ಯಾಹಟ್ಟಿ, ಮಧುರಾ ಹುಬ್ಬಳ್ಳಿ, ಅನುಷಾ ಹಿರೇಮಠ, ಪೂಜಾ ಹೊಸಂಗಡಿ, ಸುಹಾಸ ಬ್ಯಾಹಟ್ಟಿ, ಇವರು ಆಯ್ಕೆಯಾದ ವಿದ್ಯಾರ್ಥಿಗಳು. ಆಡಳಿತ ಮಂಡಳಿ, ಪ್ರಾಂಶುಪಾಲ ಡಾ. ಎಂ.ಎಂ. ಅವಟಿ, ಟ್ರೇನಿಂಗ್ ಮತ್ತು ಪ್ಲೇಸ್ಮೆಂಟ್ ಅಧಿಕಾರಿಗಳಾದ ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ ಮತ್ತು ಎಲ್ಲ ವಿಭಾಗದ ಮುಖ್ಯಸ್ಥರು, ಉಪನ್ಯಾಸ ವರ್ಗದವರು ಆಯ್ಕೆಯಾದ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ಹೈನುಗಾರಿಕೆ, ಕುರಿ/ಮೇಕೆ ಸಾಕಾಣಿಕೆ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪಶುಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರ ಧಾರವಾಡದಲ್ಲಿ ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಧಾರವಾಡ, ಗದಗ, ಹಾವೇರಿ, ಕಾರವಾರ ಜಿಲ್ಲೆಗಳ ರೈತ/ ರೈತ ಮಹಿಳೆಯರಿಗೆ ಎರಡು ದಿನಗಳ ಅವಧಿಯ ತಂಡವಾರು ಉಚಿತ ವೈಜ್ಞಾನಿಕ ಹೈನುಗಾರಿಕೆ ಮತ್ತು ಕುರಿ/ಮೇಕೆ ಸಾಕಾಣಿಕೆ ತರಬೇತಿಯನ್ನು ನೀಡಲಾಗುತ್ತದೆ.

ಆಸಕ್ತಿಯುಳ್ಳ ರೈತರು ತಮ್ಮ ಹೆಸರನ್ನು ಕಚೇರಿಯ ದೂರವಾಣಿ ಸಂಖ್ಯೆ–0836–2443743 ಅಥವಾ ಖುದ್ದಾಗಿ ಭೇಟಿ ನೀಡಿ ಬೆಳಿಗ್ಗೆ 10.15ರಿಂದ ಸಂಜೆ 5.30 ಗಂಟೆಯವರೆಗೆ ನೊಂದಾಯಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಸುವರ್ಣಾವಕಾಶ

## ಜುಲೈ 13ರಂದು ರಾಷ್ಟ್ರೀಯ ಲೋಕ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಉಚ್ಛ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ 2024ರ ಜುಲೈ 13ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನದ ಮೂಲಕ ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ. ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್‌ಎಮ್‌ಆರ್‌ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ಗುರುತಿಸಲಾಗಿದೆ.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನವೊಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯುಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಜುಲೈ 13ರಂದು ಜರಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೋದಿಯವರ ಹಲವಾರು ಹೇಳಿಕೆಗಳಿಂದ ಮಾದರಿ ನೀತಿ ಸಂಹಿತೆ ಉಲ್ಲಂಘನೆ: ಸೀತಾರಾಂ ಯೆಚೂರಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

'ದೇಶದ ವಿವಿಧ ಭಾಗಗಳಲ್ಲಿ ತಮ್ಮ ಲೋಕಸಭಾ ಚುನಾವಣಾ ಪ್ರಚಾರದ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ಮಾದರಿ ನೀತಿ ಸಂಹಿತೆ ಉಲ್ಲಂಘಿಸುವ ಹೇಳಿಕೆಗಳನ್ನು ನೀಡಿದ್ದಾರೆ' ಎಂದು ಸಿಪಿಐ(ಎಂ) ಪ್ರಧಾನ ಕಾರ್ಯದರ್ಶಿ ಸೀತಾರಾಂ ಯೆಚೂರಿ ಅವರು ಗುರುವಾರ ಆರೋಪಿಸಿದ್ದಾರೆ.

ರಾಮನ ವಿಚಾರದಲ್ಲಿ ಕೋಮು ಧ್ರುವೀಕರಣವನ್ನು ಚುರುಕುಗೊಳಿಸುವ ಉದ್ದೇಶದಿಂದ ಮೋದಿ ನೀಡಿರುವ ಹೇಳಿಕೆಗಳನ್ನು ಪಟ್ಟಿ ಮಾಡಿ ಚುನಾವಣಾ ಆಯೋಗಕ್ಕೆ ದೂರು ನೀಡಿರುವುದಾಗಿ ಯೆಚೂರಿ ಹೇಳಿದ್ದಾರೆ.

ಉತ್ತರ ಕೇರಳ ಜಿಲ್ಲೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿಪಿಎಂ ಪಕ್ಷವು ಮೋದಿ ಮತ್ತು ಬಿಜೆಪಿಯನ್ನು ವಿರೋಧಿಸುತ್ತಿಲ್ಲ ಎಂದು ಎಡರಂಗವನ್ನು ಆರೋಪಿಸಿದ್ದಕ್ಕಾಗಿ ಕಾಂಗ್ರೆಸ್-ಯುಡಿಎಫ್ ಅನ್ನು ಟೀಕಿಸಿದರು.


ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ವಿರೋಧಿಸಿ ಬಂಧನಕ್ಕೊಳಗಾದ ಮೊದಲ ರಾಜಕೀಯ ನಾಯಕರಲ್ಲಿ ನಮ್ಮವರು ಒಬ್ಬರು. 370ನೇ ವಿಧಿಯ ನಂತರ ಕಾಶ್ಮೀರದಲ್ಲಿ ರಾಜಕಾರಣಿಗಳ ಬಂಧನದ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಹೇಬಿಯಸ್ ಕಾರ್ಪಸ್ ಅರ್ಜಿ ಸಲ್ಲಿಸಿದ್ದು ಎಡ ಪಕ್ಷ. ಉನ್ನತ ನ್ಯಾಯಾಲಯದಲ್ಲಿ ಚುನಾವಣಾ ಬಾಂಡ್‌ಗಳನ್ನು ವಿರೋಧಿಸಿದ ಮೊದಲಿಗರು ಸಿಪಿಐ (ಎಂ) ಎಂದು ಹೇಳಿದರು."ಈ ಎಲ್ಲ ವಿಷಯಗಳಲ್ಲಿ ಮತ್ತು ಇತರ ಹಲವು ವಿಷಯಗಳಲ್ಲಿ ಕೇಸರಿ ಪಕ್ಷವನ್ನು ವಿರೋಧಿಸುವ ಸಿಪಿಐ(ಎಂ) ಮುಂಚೂಣಿಯಲ್ಲಿದೆ. ಈ ಎಲ್ಲ ಸಂದರ್ಭಗಳಲ್ಲಿ ಬಿಜೆಪಿಯನ್ನು ವಿರೋಧಿಸುವುದಿಲ್ಲ ಎಂದು ನಮ್ಮ ಮೇಲೆ ಆರೋಪ ಮಾಡುವವರು ಎಲ್ಲಿದ್ದಾರೆ" ಎಂದು ಪ್ರಶ್ನಿಸಿದರು.ಸಿಪಿಐ(ಎಂ)ನ ವಟಕರ ಎಲ್‌ಎಸ್ ಅಭ್ಯರ್ಥಿ ಕೆ ಕೆ ಶೈಲಜಾ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ನಡೆಯುತ್ತಿರುವ ಪ್ರಚಾರದ ಹಿನ್ನೆಲೆಯಲ್ಲಿ ಯೆಚೂರಿ ಈ ಹೇಳಿಕೆ ನೀಡಿದ್ದಾರೆ.

ಆಕೆಯ ವಿರುದ್ಧದ ಪ್ರಚಾರವನ್ನು "ವೈರಲ್ ಮತ್ತು ಅಶ್ಲೀಲ" ಎಂದು ಬಣ್ಣಿಸಿದ ಅವರು, ಇದು ಚುನಾವಣೆಯಲ್ಲಿ ಗೆದ್ದಿರುವುದನ್ನು ಸೂಚಿಸುತ್ತದೆ ಎಂದು ಹೇಳಿದರು. ಕಾಂಗ್ರೆಸ್‌ನ ಹಲವು ನಾಯಕರು ಪಕ್ಷ ತೊರೆದು ಬಿಜೆಪಿ ಸೇರಿರುವುದರಿಂದ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಯೆಚೂರಿ ಒತ್ತಾಯಿಸಿದ್ದಾರೆ.

"ನಾವು ಮೋದಿ ವಿರೋಧಿಗಳಲ್ಲ ಎಂದು ಹೇಳುವ ಮೂಲಕ ಅವರು ನಮ್ಮ ಮೇಲೆ ದಾಳಿ ಮಾಡುತ್ತಾರೆ. ಹಾಗಾಗಿ, ವೈಯಕ್ತಿಕ ದಾಳಿಯ ಆಧಾರದಲ್ಲಿ ಅಲ್ಲ, ಸತ್ಯ ಮತ್ತು ವಸ್ತುವಿನ ಆಧಾರದ ಮೇಲೆ ಮಾತನಾಡೋಣ" ಎಂದು ಅವರು ಹೇಳಿದರು.ರಾಜಕೀಯ ಪ್ರಚಾರದ ಸಮಯದಲ್ಲಿ ಎಲ್ಲರೂ ಅಲಂಕಾರವನ್ನು ಕಾಪಾಡಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು."ಸಂಬಂಧಿಸಿದ ಎಲ್ಲರಿಗೂ ನನ್ನ ಏಕೈಕ ಮನವಿ ಎಂದರೆ, ನಮ್ಮ ರಾಜಕೀಯ ನಿಲುವು ಮತ್ತು ನೀತಿಗಳನ್ನು ಖಂಡಿತವಾಗಿ ಟೀಕಿಸುವುದು, ಪ್ರಚಾರ ಮಾಡುವುದು ಮತ್ತು ದಾಳಿ ಮಾಡುವುದು. ಆದರೆ, ಅಸತ್ಯಗಳನ್ನು ಹೇಳುವ ಮತ್ತು ವೈಯಕ್ತಿಕ ದಾಳಿ ನಡೆಸುವವರೆಗೆ ಹೋಗಬೇಡಿ. ನಾವು ಅಭಿಯಾನದ ಸೌಜನ್ಯವನ್ನು ಕಾಪಾಡಿಕೊಳ್ಳೋಣ" ಎಂದು ಅವರು ಹೇಳಿದರು.

### ಜ. ತೋಂಟದಾರ್ಯ ಮಠದ ಜಾತ್ರೆಯ ನಿಮಿತ್ತ ವಿಶೇಷ ಲೇಖನ

# ಭಾವೈಕ್ಯತೆಯ ಭಾವ ಸಂಭ್ರಮ



ತೋಂಟದ ಸಿದ್ಧಲಿಂಗನ ಜಾತ್ರೆ ಅಂದರೆ, ಗ್ರಾಮ ಮತ್ತು ಪಟ್ಟಣಗಳ ಒಂದು ಪ್ರಮುಖ ಪರಂಪರೆ. ಸಾಮಾನ್ಯವಾಗಿ ಒಂದು ಸಾರ್ವಜನಿಕ ಉದ್ದೇಶಕ್ಕಾಗಿ ಒಂದುಗೂಡಿಸುವಿಕೆಯೇ ಜ. ತೋಂಟದಾರ್ಯ ಮಠದ ಜಾತ್ರಾ ವಿಶೇಷತೆ ಎಂದು ಪರಿಗಣಿಸಲಾಗುತ್ತಿದೆ. ಪ್ರತಿ ವರ್ಷಕ್ಕೊಮ್ಮೆ ಸರ್ವತ್ರ ಸುಭಿಕ್ಷಾರ್ಥವಾಗಿ ಧಾರ್ಮಿಕ ಪರಂಪರೆಯಂತೆ ಪೂಜಾ ಉತ್ಸವಗಳೊಂದೊಡಗೂಡಿದ ಜ. ತೋಂಟದಾರ್ಯ ಮಠದ ರಥೋತ್ಸವವನ್ನು ಅತೀ ವಿಜೃಂಭಣೆಯಿಂದ ನಡೆಸಲಾಗುತ್ತಿದೆ.

ಇದು ನಮ್ಮ ದಕ್ಷಿಣ ಭಾಗದ ಕರ್ನಾಟಕದಲ್ಲಿ ನಡೆಯುವ ಅತಿ ದೊಡ್ಡ ಜಾತ್ರೆ. ಈ ಜಾತ್ರೆಗೆ ನಾಡಿನ ಮೂಲೆ ಮೂಲೆಗಳಿಂದ ಭಕ್ತಸಾಗರ ಹರಿದು ಬರುತ್ತದೆ. ಜಾತ್ರೆ ಅಂದಾಗ ಬರೀ ಉತ್ತತ್ತಿ-ಬಾಳೆಹಣ್ಣು ಎಸೆದು ಮೋಜು ಮಾಡುವಂತ ಜಾತ್ರೆಯಲ್ಲ. ಈ ಜಾತ್ರೆಯ ವಿಶೇಷತೆಯೇ ವಿಭಿನ್ನ. ಅನೇಕಾನೇಕ ಮನರಂಜನಾ ಕಾರ್ಯಕ್ರಮ, ಆರೋಗ್ಯ ಶಿಬಿರ, ಹೈನುಗಾರಿಕೆ, ಕೃಷಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದ ಜೊತೆಗೆ ಜಾನಪದ ಕಲೆಗಳ ಪ್ರದರ್ಶನ ನಾಡಿನಲ್ಲಿ ಸಮಾಜಕ್ಕಾಗಿ, ದೇಶಕ್ಕಾಗಿ, ಸ್ವಾರ್ಥ ರಹಿತ ಸೇವೆಯನ್ನು ಸಲ್ಲಿಸಿದಂತ ನಾಡಿನ ಗಣ್ಯರ ಮಹಾತ್ಮರ ಕುರಿತು ಪುಸ್ತಕ ಬಿಡುಗಡೆ ಕಾರ್ಯಕ್ರಮ, ದಾಸೋಹ ಸೇವೆ ಜನಮನಕ್ಕೆ ಜ್ಞಾನವನ್ನು ಹಂಚುವಂತ ಜಾತ್ರೆಯಂದರೆ ಅದು ಜ. ತೋಂಟದಾರ್ಯ ಮಠದ ಜಾತ್ರೆ.

ಜಾತ್ರೆ ಎಂದರೆ ಜನ ಸೇರಿ ಉತ್ತತ್ತಿ ಬಾಳೆಹಣ್ಣು ಎಸೆದರೆ ಸಾಲದು. ಅದು ಜ್ಞಾನವನ್ನು ಹಂಚಿ ಮೌಢ್ಯತೆಯನ್ನು ತೊಲಗಿಸಿ, ವೈಚಾರಿಕತೆಯನ್ನು ಮೂಡಿಸುವುದೇ ಜಾತ್ರೆಯ ಉದ್ದೇಶವೆಂದು ಜಾತ್ರೆಗಳು ಜನಮಾನಸಕ್ಕೆ ಸಾರಿ ಹೇಳುವದೇ ನಿಜವಾದ ಜಾತ್ರೆ. ಜಾತ್ರೆ ಆಚರಿಸುವ ಉದ್ದೇಶ ಜಾತಿ-ಲಿಂಗ, ವರ್ಣಭೇದವಿಲ್ಲದೆ ಬಡವ, ಶ್ರೀಮಂತ ಎಂದು ಪರಿಗಣಿಸದೆ ಎಲ್ಲ ಧರ್ಮದ ಭಕ್ತರು ಜಾತ್ರೆಯಲ್ಲಿ ಪಾಲ್ಗೊಂಡು ನೋವು-ನಲಿವು ತಮ್ಮೆಲ್ಲಾ ಚಿಂತೆಗಳನ್ನು ಬದಿಗೊತ್ತಿ ಅಜ್ಜನ ಜಾತ್ರೆಯಲ್ಲಿ ಪಾಲ್ಗೊಂಡು ಪಾವನರಾಗುತ್ತಾರೆ.



ಜಗದ್ಗುರು ತೋಂಟದಾರ್ಯ ಸಿದ್ಧಲಿಂಗೇಶ್ವರ ಜಾತ್ರೆ ಸಡಗರ ಸಂಭ್ರಮದಿಂದ ಗರಿಗೆದರಿದೆ. ತ್ರಿವಿಧ ದಾಸೋಹಿ ಪೂಜ್ಯ ಶ್ರೀ ಜಗದ್ಗುರು ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ದಿವ್ಯ ಪ್ರಕಾಶದಲ್ಲಿ ಶ್ರೀ ಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಇವರ ಸನ್ನಿಧಿಯಲ್ಲಿ 2024ರ ಜಾತ್ರಾ ಮಹೋತ್ಸವದ ಕಾರ್ಯಕ್ರಮಗಳು ಜರುಗುತ್ತವೆ.

ಏಪ್ರಿಲ್ 22ರಂದು ಪ್ರಾರಂಭೋತ್ಸವ, ಏ.23ರಂದು ಮಹಾರಥೋತ್ಸವ, ಏ.24ರಂದು ಲಘು ರಥೋತ್ಸವ, ಏ.25ರಂದು ಮಂಗಲೋತ್ಸವ ಅಷ್ಟೇ ಅಲ್ಲದೆ, ಅಲ್ಲದೆ ಸಾಯಂಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುತ್ತವೆ. ಈ ಎಲ್ಲ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ರಾಜ್ಯದ ವಿವಿಧ ಭಾಗಗಳಿಂದ ಜನರು ದೊಡ್ಡ ಸಂಖ್ಯೆಯಲ್ಲಿ ಬರುತ್ತಾರೆ. ಹೊರ ರಾಜ್ಯದಲ್ಲಿ ನೆಲೆಸಿರುವ ಬಸವ ಭಕ್ತರು ತೋಂಟದ ಸಿದ್ಧಲಿಂಗನ ಭಕ್ತರು ಇದ್ದಾರೆ. ಉದ್ಯೋಗ ಅರಸಿ ಹೊರ ಊರುಗಳಲ್ಲಿ ಇರುವವರು ಸಹ ವರ್ಷಕ್ಕೊಮ್ಮೆ ನಡೆಯುವ ಜಾತ್ರೆ ಬಂತು ಎಂದರೆ ಏನೋ ಸಡಗರ ಯಾವಾಗ ಜಾತ್ರೆಯಲ್ಲಿ ತೊಡಗಿ ಕರ್ತೃ ಗದ್ದುಗಿ ದರ್ಶನ ಮಾಡಿ ಪಾವನರಾಗುತ್ತೇವೋ ಎಂಬ ತವಕ.

ಮಾನವತೆಯ ಮಂಗಳದ ವಿಶ್ವ ಸಂಸ್ಕೃತಿಯ ಉಜ್ವಲ ತಿಹಾಸದಲ್ಲಿ 12ನೇ ಶತಮಾನದ ಶಿವಾಬ್ಧಿ ಸ್ವರೋಣದಯವಾಗಿತ್ತು. ಮಾನವತೆ ಮಂಗಳದ ಮುಂಬೆಳಗಾಗಿ ಮೂಡಿ ಬಂದ ಬಸವಾದಿ ಪ್ರಮಥರನ್ನು ಕನ್ನಡದ ಬಂಗಾರದ ಭಾಂದಳದಲ್ಲಿ ವಚನ ಓಂಕಾರದ ಸುನಾದವನ್ನು ಮೊಳಗಿಸಿದವರು ಪೂಜ್ಯ ಲಿಂ. ಸಿದ್ಧಲಿಂಗ ಶ್ರೀಗಳು.

ಸದ್ಯದ ಪೂಜ್ಯ ಡಾ. ಸಿದ್ಧರಾಮ ಮಹಾಸ್ವಾಮಿಗಳು ಸಹ ಗುರುಗಳ ಮಾರ್ಗದಲ್ಲಿ ನಡೆದು ಶ್ರೀ ಮಠವನ್ನು ಉತ್ತುಂಗಕ್ಕೆ ಏರಿಸಿದ್ದಾರೆ. ಈ ಕಾರಣಕ್ಕಾಗಿಯೇ ಸರಕಾರ ಕೂಡಾ ನಿತ್ಯ ಶಿವಾನುಭವ ಮೂಲಕ 12ನೇ ಶತಮಾನ ಬಸವಾದಿ ಶರಣ ಚಿಂತಕರ ಕುರಿತು ಉಪನ್ಯಾಸ ಏರ್ಪಡಿಸುವುದರ ಮೂಲಕ ಪೂಜ್ಯ ಜಗದ್ಗುರು ಡಾ. ಸಿದ್ಧಲಿಂಗ ಮಹಾಸ್ವಾಮಿಗಳ ಜನ್ಮದಿನವನ್ನು 'ಭಾವೈಕ್ಯತೆಯ ದಿನ'ವನ್ನಾಗಿ ಘೋಷಿಸಿ ಪೂಜ್ಯರ ಜಯಂತಿಯನ್ನು ಆಚರಿಸುವಂತಾಯಿತು.

ಕೋಮು ಸೌಹಾರ್ದತೆಗೆ, ವೈಚಾರಿಕತೆಗೆ ಹೆಸರಾದ ಶ್ರೀಮಠವು, ಇಂದಿನ ಆಧುನಿಕ ಯುಗದಲ್ಲಿ ಮಠಗಳು ಕೇವಲ ದೈವಭಕ್ತಿ ಕೇಂದ್ರಗಳಾಗಿದ್ದರೆ ಸಾಲದು, ಜಾತ್ರೆಗಳು ಮೂಢನಂಬಿಕೆಗಳ ಪ್ರತೀಕವಾಗಬಾರದು ಎನ್ನುವ ಸದುದ್ದೇಶದಿಂದ ರಥೋತ್ಸವವನ್ನು ಕಾರಣವಾಗಿಟ್ಟುಕೊಂಡು ಬಸವಾದಿ ಪ್ರಮಥರ, ಶರಣರ, ಸಂತರ ಮಹಾಸಂದೇಶಗಳನ್ನು



ಜನಸಾಮಾನ್ಯರಿಗೆ ತಲುಪಿಸಲಾಗುತ್ತಿದೆ. ಜಾತ್ರೆಗಳು ಸಾಂಸ್ಕೃತಿಕ ಸಂದೇಶಗಳನ್ನು ಸಾರುವ ಸಮ್ಮೇಳನವಾಗಬೇಕು. ಈ ದಿಶೆಯಲ್ಲಿ ಗದುಗಿನ ತೋಂಟದ ಸಿದ್ಧಲಿಂಗ ಯತಿಗೆ ರಥೋತ್ಸವವು ಜನ ಸಾಮಾನ್ಯರ ಜಾತ್ರೆಯಾಗಿ ಸಾಂಸ್ಕೃತಿಕ ಚಟುವಟಿಕೆಗಳ ಸಮ್ಮೇಳನವಾಗಿ ನಡೆಯುತ್ತಿರುವುದು ಈ ಭಾಗದ ಜನರಿಗೆ ಹೆಮ್ಮೆಯ ವಿಷಯ.

ಧರ್ಮಗುರು ಬಸವಣ್ಣನವರು ವಚನದಾಶಯದಂತೆ ಧೀರ ಜಂಗಮರಾಗಿ ಬದುಕಿದವರು ಮರಣವನ್ನು ಮಹಾನವಮಿ ಹಬ್ಬವಾಗಿ ಸ್ವೀಕರಿಸಿದರು. ಲಿಂಗಾಯತ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ಹೋರಾಡಿ ಕೇಂದ್ರಕ್ಕೆ ಶಿಫಾರಸ್ಸು ಮಾಡುವಲ್ಲಿ ಯಶಸ್ವಿಯೂ ಆದರೂ ಹೀಗೆ ಜನಮಾನಸಕ್ಕೆ ಜ್ಞಾನ ಮೂಲಕ ಹೊಸ ನಾಂದಿಯನ್ನು ಹಾಡಿದವರು ಲಿಂ. ಡಾ. ಸಿದ್ಧಲಿಂಗ ಮಹಾಸ್ವಾಮಿಗಳು ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಾವೆಲ್ಲ ಜೀವನದಲ್ಲಿ ನಡೆದು ಕರಿಬಸಯ್ಯಜ್ಜನ ಕೃಪೆಗೆ ಹಾಗೂ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಗುರುಕೃಪೆಗೆ ಪಾತ್ರರಾಗೋಣ.

**- ಚಿದಾನಂದಯ್ಯ ಶ್ರೀಶಾಂತಯ್ಯನಮಠ.**
**ಗದಗ.**

### ಚುನಾವಣೆಯಲ್ಲಿ ಹಸ್ತಕ್ಷೇಪ ಆರೋಪ

## ಬಂಗಾಳ ರಾಜ್ಯಪಾಲ ಆನಂದ ಬೋಸ್ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು

■ವಿಜಯಸಾಕ್ಷಿ ಸುದ್ದಿ, ಪಶ್ಚಿಮ ಬಂಗಾಳ



ಪಶ್ಚಿಮ ಬಂಗಾಳದ ರಾಜ್ಯಪಾಲ ಸಿವಿ ಆನಂದ ಬೋಸ್ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದ್ದು, ರಾಜ್ಯದಲ್ಲಿ ನಡೆಯಲಿರುವ ಲೋಕಸಭೆ ಚುನಾವಣೆಯಲ್ಲಿ ಮಧ್ಯಪ್ರವೇಶಿಸಿದ್ದಾರೆ ಎಂದು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಗುರುವಾರ ಆರೋಪ ಮಾಡಿದೆ.

"2024ರ ಲೋಕಸಭೆ ಚುನಾವಣೆಯಲ್ಲಿ ಪದೇಪದೆ ಮಧ್ಯಪ್ರವೇಶಿಸಿದ್ದಾರೆ; ಮತ್ತು ಮತದಾನದ ದಿನದಂದು ಮತದಾನ ನಡೆಯುವ ಪ್ರದೇಶಗಳಿಗೆ ಭೇಟಿ ನೀಡಲು ಪ್ರಯತ್ನಿಸಿದ್ದು, ರಾಜ್ಯಪಾಲ ಸಿವಿ ಆನಂದ ಬೋಸ್ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು ನೀಡಲಾಗಿದೆ" ಎಂದು ಟಿಎಂಸಿ ನಾಯಕರೊಬ್ಬರು ತಿಳಿಸಿದ್ದಾರೆ.

ಲೋಕಸಭಾ ಚುನಾವಣೆಯ ಮೊದಲ ಹಂತದ ಮುನ್ನಾದಿನದಂದು ತಮ್ಮ ಉದ್ದೇಶಿತ ಕೂಚ್ ಬೆಹಾರ್ ಪ್ರವಾಸವನ್ನು ರದ್ದುಗೊಳಿಸುವಂತೆ ಚುನಾವಣಾ ಆಯೋಗವು ಪಶ್ಚಿಮ ಬಂಗಾಳ ರಾಜ್ಯಪಾಲರಿಗೆ ಸಲಹೆ ನೀಡಿದೆ. ಏಕೆಂದರೆ, ಇದು ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘಿಸಿದೆ ಎಂದು ಮೂಲಗಳು ಬುಧವಾರ ತಿಳಿಸಿವೆ.

## ಗ್ಯಾರಂಟಿ ಹೆಸರಲ್ಲಿ ಕಾಂಗ್ರೆಸ್ ಮೋಸ ಮಾಡಿದೆ

■ವಿಜಯಸಾಕ್ಷಿ ಸುದ್ದಿ, ಹಾವೇರಿ



ಕಾಂಗ್ರೆಸ್‌ನವರು ಗ್ಯಾರಂಟಿ ಹೆಸರಲ್ಲಿ ಅತ್ತೆಗೆ ಕೊಟ್ಟು ಸೊಸೆಗೆ ಮೋಸ ಮಾಡಿದ್ದಾರೆ ಎಂದು ಚಿತ್ರನಟಿ ಹಾಗೂ ವಿ.ಪ ಮಾಜಿ ಸದಸ್ಯೆ ತಾರಾ ಅನುರಾಧ ಹೇಳಿದರು.

ಅವರು ಹಾವೇರಿ ಲೋಕಸಭಾ ಕ್ಷೇತ್ರದ ಹಾನಗಲ್ ತಾಲೂಕಿನ ಅಕ್ಕಿ ಆಲೂರಿನಲ್ಲಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಏರ್ಪಡಿಸಿದ್ದ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದರು.

ಇಡೀ ದೇಶವನ್ನು ತನ್ನ ಪರಿವಾರ ಎಂದು ಕರೆದ ಏಕೈಕ ವ್ಯಕ್ತಿ ಪ್ರಧಾನಿ ನರೇಂದ್ರ ಮೋದಿಯವರು. ಮೋದಿ ಅವರ ಹೆಸರಲ್ಲೆ ಮತ ಕೇಳುತ್ತಿದ್ದೀರಾ ಎನ್ನುತ್ತಾರೆ. ಇಡೀ ವಿಶ್ವವೇ ಅವರನ್ನು ಕರೆದು ಗೌರವಿಸುತ್ತಿದೆ. ಅಂತವರ ಹೆಸರಿನಲ್ಲಿ ಮತ ಕೇಳುವುದರಲ್ಲಿ ತಪ್ಪೇನು ಎಂದು ಪ್ರಶ್ನಿಸಿದರು.

ಕಾಂಗ್ರೆಸ್‌ನವರು ಬಸ್‌ನಲ್ಲಿ ಮಹಿಳೆಯರಿಗೆ ಮಾತ್ರ ಫ್ರೀ ಎಂದು ಹೇಳಿ ಗಂಡಸರಿಗೆ ಡಬಲ್ ರೇಟ್ ಹಾಕಿದ್ದಾರೆ. ಸಂಸಾರ ಅಂದ ಮೇಲೆ ಗಂಡ, ಹೆಂಡತಿ, ಮಕ್ಕಳು ಎಲ್ಲರೂ ಇರುತ್ತೇವೆ. ವಿದ್ಯುತ್ ಫ್ರೀ ಎಂದು ಹೇಳಿ ಎರಡು ಪಟ್ಟು ಬಿಲ್ ಹೆಚ್ಚಳ ಮಾಡಿದ್ದಾರೆ. ಗ್ಯಾರಂಟಿ ಹೆಸರಿನಲ್ಲಿ ಕಾಂಗ್ರೆಸ್ ಮೋಸ ಮಾಡುತ್ತಿದೆ ಎಂದು ಆರೋಪಿಸಿದರು.

### ಚುನಾವಣೆ ಬಳಿಕ ಮತ್ತೆ ಹಿಂಸಾಚಾರದ ಆತಂಕ।

## ಸುಪ್ರೀಂ ಮೊರೆ ಹೋದ ಮಣಿಪುರದ ಕುಕಿ-ಝೋ ಸಮುದಾಯ: ವರದಿ

■ವಿಜಯಸಾಕ್ಷಿ ಸುದ್ದಿ, ಮಣಿಪುರ

ಲೋಕಸಭೆ ಚುನಾವಣೆಯ ಬಳಿಕ ರಾಜ್ಯದಲ್ಲಿ ತಮ್ಮ ವಿರುದ್ಧ ಮತ್ತೆ ಹಿಂಸಾಚಾರ ನಡೆಯುವ ಆತಂಕ ವ್ಯಕ್ತಪಡಿಸಿರುವ ಮಣಿಪುರದ ಬುಡಕಟ್ಟು ಜನಾಂಗ ಕುಕಿ-ಝೋ ಸುಪ್ರೀಂ ಕೋರ್ಟ್ ಮೊರೆ ಹೋಗಿದೆ.

ಕಳೆದ ಆರು ತಿಂಗಳಿನಿಂದ, ಮಣಿಪುರದ ಕುಕಿ-ಝೋ ಸಮುದಾಯವು ಆಕ್ರಮಣಕಾರಿ ಗುಂಪುಗಳು ಸಂಪೂರ್ಣ ಶಸ್ತ್ರಸಜ್ಜಿತರಾಗಿ ಸಿದ್ಧರಾಗುತ್ತಿರುವುದನ್ನು ಪ್ರತ್ಯಕ್ಷವಾಗಿ ನೋಡಿದೆ. ಈ ಗುಂಪುಗಳಲ್ಲಿ ಒಂದಾದ ಅರಂಬೈ ಟೆಂಗೋಲ್ ಕುಕಿಗಳನ್ನು ನಾಶ ಮಾಡುವುದಾಗಿ ಬೆದರಿಕೆ ಹಾಕಿದೆ ಎಂದು ಅರ್ಜಿಯಲ್ಲಿ ಹೇಳಿರುವುದಾಗಿ ಬಾರ್ & ಬೆಂಚ್ ವರದಿ ಮಾಡಿದೆ.

ಹಿಂಸಾಚಾರದ ತನಿಖೆಗಳ ಮೇಲ್ವಿಚಾರಣೆಗಾಗಿ ಸುಪ್ರೀಂ ಕೋರ್ಟ್ ನೇಮಿಸಿರುವ ಮಹಾರಾಷ್ಟ್ರದ ಪೊಲೀಸ್ ಅಧಿಕಾರಿ ದತ್ತಾತ್ರೇ ಪಡಸಾಲಿಗೀಕರ್ ಅವರು ಕುಕಿ- ಝೋ ಸಮುದಾಯದ ನೆರವಿಗೆ ಬಂದಿಲ್ಲ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

ಸಮುದಾಯದ ಮೇಲಿನ ಕ್ರೂರ ದಾಳಿಯ ಬಗ್ಗೆ ಮತ್ತೆ ಮತ್ತೆ ಮನವಿ ಸಲ್ಲಿಸಿದ್ದರೂ ಅವರು ಯಾವುದೇ ಕ್ರಮ ಕೈಗೊಂಡಿಲ್ಲ.




ದಾಳಿಕೋರರು ಸ್ವತಂತ್ರವಾಗಿ ತಿರಗುತ್ತಿದ್ದುಮ ಹಿಂಸಾಚಾರ ಮತ್ತು ಶಸ್ತ್ರಾಸ್ತ್ರ ದೋಚುವಿಕೆಗೆ ಸಂಬಂಧಿಸಿದಂತೆ ಪಡಸಾಲಗೀಕರ್ ಅವರಿಗೆ ಐದು ಮನವಿ ಸಲ್ಲಿಸಿದ್ದರೂ, ಸಂತ್ರಸ್ತ ಸಮುದಾಯದ ನೆರವಿಗೆ ಬಂದಿಲ್ಲ ಎಂದು ಹೇಳಲಾಗಿದೆ.

ಮೊದಲ ದಾಳಿಗಿಂತಲೂ ತೀವ್ರ ದಾಳಿ ನಡೆಯುವ ಸಾಧ್ಯತೆ ಇರುವುದರಿಂದ ನ್ಯಾಯಾಲಯದ ಮುಂದೆ ಕೈಮುಗಿದು ನಿಂತಿದ್ದೇವೆ. ಕುಕಿ ಸಮುದಾಯದ ಬಾಲಕನ ಶಿರಚ್ಛೇದ ಮಾಡಿದ ಆರೋಪ ಎದುರಿಸುತ್ತಿರುವ ಕುಂಬಿ ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕ ಎಸ್ ಪ್ರೇಮಚಂದ್ರ ಸಿಂಗ್ ಅವರನ್ನು ಬಂಧಿಸಬೇಕು. ಹಿಂಸಾಚಾರ ತಡೆಗಟ್ಟಲು ಅರಂಬೈ ಟೆಂಗೋಲ್ ಮತ್ತು ಮೈತೇಯಿ ಲೀಪುನ್ ಗುಂಪಿನ ನಾಯಕರನ್ನು ಬಂಧಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

ಅಲ್ಲದೆ, 170 ಕುಕಿಗಳ ಸಾವು, ಮಹಿಳೆಯರ ಮೇಲಿನ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಸಿದ್ಧಪಡಿಸಲಾದ ಆರೋಪ ಪಟ್ಟಿಗಳ ವಿವರಗಳನ್ನು ಮಣಿಪುರ ಸರ್ಕಾರ ಕೂಡಲೇ ಬಹಿರಂಗಪಡಿಸಬೇಕು. ಭಾರತೀಯ ಸೇನೆಯು ತಕ್ಷಣವೇ ಕುಕಿ-ಝೋ ಸಮುದಾಯದ ಜೀವ ಮತ್ತು ಆಸ್ತಿ ರಕ್ಷಣೆಗೆ ಮುಂದಾಗಬೇಕು. ಪಡಸಾಲಿಗೀಕರ್ ಮತ್ತು ನ್ಯಾಯಮೂರ್ತಿ ಗೀತಾ ಮಿತ್ತಲ್ ಸಮಿತಿ ಸಲ್ಲಿಸಿದ ವರದಿಗಳನ್ನು ಬಹಿರಂಗಪಡಿಸಬೇಕು ಎಂದು ಆಗ್ರಹಿಸಲಾಗಿದೆ.

ಮಣಿಪುರ ಹಿಂಸಾಚಾರಕ್ಕೆ ಸಂಬಂಧಿಸಿದ ವಿವಿಧ ಅರ್ಜಿಗಳು ಸುಪ್ರೀಂ ಕೋರ್ಟ್ ಅಂಗಳದಲ್ಲಿವೆ. ಹಿಂಸಾಚಾರದ ತನಿಖೆ ಮೇಲ್ವಿಚಾರಣೆಗಾಗಿ ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ ಗೀತಾ ಮಿತ್ತಲ್ ಅವರ ನೇತೃತ್ವದ ಅಖಿಲ ಮಹಿಳಾ ನ್ಯಾಯಾಂಗ ಸಮಿತಿಯನ್ನು ಸುಪ್ರೀಂ ಕೋರ್ಟ್ ರಚಿಸಿದೆ. ಆದರೆ, ರಾಜ್ಯ ಸರ್ಕಾರದ ಪ್ರತಿಯೊಂದು ವಿವರಗಳನ್ನು ಪರಿಶೀಲಿಸುವ ಕೆಲಸ ತನ್ನದಲ್ಲ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳು ಕೆಲ ತಿಂಗಳುಗಳ ಹಿಂದೆ ತಿಳಿಸಿದ್ದರು.

## ಇವಿಎಂ-ವಿವಿಪ್ಯಾಟ್ ಎಲ್ಲಾ ಮತಗಳ ಪರಿಶೀಲನೆ: ತೀರ್ಪು ಕಾಯ್ದಿರಿಸಿದ ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ವೋಟರ್ ವೆರಿಫೈಯಬಲ್ ಪೇಪರ್ ಆಡಿಟ್ ಟ್ರಯಲ್ (ವಿವಿಪ್ಯಾಟ್) ಮತ್ತು ಎಲೆಕ್ಟ್ರಾನಿಕ್ ವೋಟಿಂಗ್ ಮೆಷಿನ್ (ಇವಿಎಂ) ನಡುವಿನ ಎಲ್ಲಾ ಮತಗಳನ್ನು (ಶೇ.100) ತಾಳೆ ಹಾಕಲು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿರುವ ಸುಪ್ರೀಂ ಕೋರ್ಟ್ ಇಂದು (ಏ.18) ತೀರ್ಪು ಕಾಯ್ದಿರಿಸಿದೆ.

ಸುದೀರ್ಘ ವಿಚಾರಣೆಯ ಬಳಿಕ, ಅಸೋಸಿಯೇಶನ್ ಫಾರ್ ಡೆಮಾಕ್ರಟಿಕ್ ರೈಟ್ಸ್ (ಎಡಿಆರ್) ಮತ್ತು ಇತರರು ಸಲ್ಲಿಸಿದ ಅರ್ಜಿಗಳ ತೀರ್ಪನ್ನು ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಮತ್ತು ದೀಪಂಕರ್ ದತ್ತಾ ಅವರ ಪೀಠ ಕಾಯ್ದಿರಿಸಿದೆ.

ವಿಚಾರಣೆಯ ಸಂದರ್ಭದಲ್ಲಿ, ಪೀಠವು ಇವಿಎಂಗಳ ಭದ್ರತಾ ವೈಶಿಷ್ಟ್ಯಗಳನ್ನು ಅರ್ಥಮಾಡಿಕೊಳ್ಳಲು ಭಾರತೀಯ ಚುನಾವಣಾ ಆಯೋಗದ (ಇಸಿಐ) ಅಧಿಕಾರಿಯೊಂದಿಗೆ ಚರ್ಚೆ ನಡೆಸಿದೆ.

ಇಂದು, ಎರಡನೇ ದಿನದ ವಿಚಾರಣೆಯಲ್ಲಿ, ವಕೀಲ ಪ್ರಶಾಂತ್



ಭೂಷಣ್ ಅವರು ಮತದಾನದ ಸಮಯದಲ್ಲಿ ವಿವಿಪ್ಯಾಟ್ ಮಸೂರದಲ್ಲಿ ಸಂಪೂರ್ಣ ಲೈಟ್ ಇರುವಂತೆ ಮಾಡಲು ಮನವಿ ಮಾಡಿದರು. ಪ್ರಸ್ತುತ ಏಳು ಸೆಕೆಂಡ್‌ಗಳ ಕಾಲ ಮಾತ್ರ ವಿವಿಪ್ಯಾಟ್ ಮಸೂರದಲ್ಲಿ ಲೈಟ್ ಇರುತ್ತವೆ. ಮತದಾನ ಪ್ರಕ್ರಿಯೆ ಮುಗಿಯುವವರೆ ಲೈಟ್ ಇದ್ದರೆ, ಮತದಾರರಿಗೆ ಸ್ಲಿಪ್ ಕಟ್ಟಾಗಿ ಬೀಳುವುದು ನೋಡಬಹುದು ಎಂಬುವುದು ಪ್ರಶಾಂತ್ ಭೂಷಣ್ ಅವರ ವಾದ.

ಇನ್ನೋರ್ವ ವಕೀಲ ನಿಝಾಂ ಪಾಶಾ ಅವರು, ಮತದಾರರು ಭೌತಿಕವಾಗಿ ವಿವಿಪ್ಯಾಟ್ ಚೀಟಿ ತೆಗೆದುಕೊಂಡು ಮತಪೆಟ್ಟಿಗೆಯಲ್ಲಿ ಹಾಕಲು ಅವಕಾಶ ನೀಡಬೇಕು ಎಂದು ಸಲಹೆ ನೀಡಿದರು. ಇದು ಮತದಾರರ ಗೌಪ್ಯತೆಯನ್ನು ಉಲ್ಲಂಘಿಸುವುದಿಲ್ಲವೇ? ಎಂದು ನ್ಯಾಯಮೂರ್ತಿ ಖನ್ನಾ ಕೇಳಿದಾಗ, ಮತದಾನದ ಗೌಪ್ಯತೆಯ ಹೆಸರಿನಲ್ಲಿ ಮತದಾರರನ್ನು ಅವರ ಹಕ್ಕಿನಿಂದ ತಡೆಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಈ ವೇಳೆ, "ನೀವು ಬಯಸುತ್ತಿರುವ ಪ್ರಾಯೋಗಿಕ ಫಲಿತಾಂಶಗಳನ್ನು ನೀವು ಅರ್ಥಮಾಡಿಕೊಂಡಿದ್ದೀರಿ ಎಂದು ನಾನು ಭಾವಿಸುತ್ತೇನೆ" ಎಂದು ನ್ಯಾಯಮೂರ್ತಿ ಖನ್ನಾ ಪ್ರತಿಕ್ರಿಯಿಸಿದ್ದಾರೆ.


ಹಿರಿಯ ವಕೀಲ ಸಂಜಯ್ ಹೆಗ್ಡೆ, ವಿವಿಪ್ಯಾಟ್ 'ಆಡಿಟ್'ಗೆ ಒತ್ತು ನೀಡಿದ್ದು, ಇವಿಎಂ ಮತಗಳ ಎಣಿಕೆಯ ನಂತರವೂ 'ಆಡಿಟ್'ಗಾಗಿ ಎಲ್ಲಾ ವಿವಿಪ್ಯಾಟ್‌ಗಳನ್ನು ಎಣಿಕೆ ಮಾಡಬೇಕು ಎಂದು ಸಲಹೆ ನೀಡಿದ್ದಾರೆ. 2019ರಲ್ಲಿ ಪ್ರತೀ ಕ್ಷೇತ್ರದ ಐದು ವಿವಿಪ್ಯಾಟ್‌ಗಳ ಮತ ಎಣಿಕೆ ಮಾಡಬೇಕು ಎಂಬ ಆದೇಶವನ್ನು ಪರಿಗಣಿಸದಂತೆ ಹೆಗ್ಡೆ ಮನವಿ ಮಾಡಿದರು. ವ್ಯವಸ್ಥೆಯಲ್ಲಿ ಮತದಾರರ ವಿಶ್ವಾಸವನ್ನು ಹೆಚ್ಚಿಸುವ ಯಾವುದೇ ಕ್ರಮವನ್ನು ಸ್ವಾಗತಿಸಬೇಕು ಎಂದಿದ್ದಾರೆ.ವಿಚಾರಣೆ ವೇಳೆ, ಕಾಸರಗೋಡಿನಲ್ಲಿ ವಿವಿಪ್ಯಾಟ್ ಪರಿಶೀಲನೆ ವೇಳೆ ಬಿಜೆಪಿ ಚಿಹ್ನೆಯ ಸ್ಲಿಪ್ ಬಂದಿರುವ ಕುರಿತ 'ಮನೋರಮಾ ಆನ್‌ಲೈನ್' ಸುದ್ದಿಯನ್ನು ವಕೀಲ ಪ್ರಶಾಂತ್ ಭೂಷಣ್ ಉಲ್ಲೇಖಿಸಿದರು. ಈ ವೇಳೆ ನ್ಯಾಯಪೀಠ ಚುನಾವಣಾ ಆಯೋಗದ ಅಧಿಕಾರಿಗಳಿಗೆ ಈ ಕುರಿತು ಪರಿಶೀಲಿಸುವಂತೆ ಸೂಚಿಸಿದೆ. ಮಧ್ಯಾಹ್ನ 2 ಗಂಟೆಗೆ ಪೀಠದ ಮುಂದೆ ಉತ್ತರಿಸಿದ ಚುನಾವಣಾ ಆಯೋಗದ ಅಧಿಕಾರಿಗಳು ಮನೋರಮಾ ವರದಿ ಸಂಪೂರ್ಣ ಸುಳ್ಳು ಎಂದು ಹೇಳಿರುವುದಾಗಿ ಲೈವ್ ಲಾ ವರದಿ ಮಾಡಿದೆ.

## ದೆಹಲಿ ಅಬಕಾರಿ ನೀತಿ ಪ್ರಕರಣ: ಸಿಸೋಡಿಯಾ ನ್ಯಾಯಾಂಗ ಬಂಧನ ಅವಧಿ ಏ.26 ರವರೆಗೆ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಪಾದಿತ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಮನಿ ಲಾಂಡರಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಎಎಪಿ ನಾಯಕ ಮತ್ತು ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ನ್ಯಾಯಾಂಗ ಬಂಧನವನ್ನು ದೆಹಲಿ ನ್ಯಾಯಾಲಯವು ಏಪ್ರಿಲ್ 26 ರವರೆಗೆ ವಿಸ್ತರಿಸಿದೆ.

ಸಿಸೋಡಿಯಾ ಅವರ ಹಿಂದೆ ವಿಸ್ತೃತ ನ್ಯಾಯಾಂಗ ಬಂಧನದ ಅವಧಿ ಮುಗಿದ ನಂತರ ರೌಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶ ಕಾವೇರಿ ಬವೇಜಾ ಅವರ ಮುಂದೆ ಹಾಜರುಪಡಿಸಲಾಯಿತು. ಸೋಮವಾರ, ಎಎಪಿ ನಾಯಕನ ಜಾಮೀನು ಅರ್ಜಿಯ ವಿಚಾರಣೆಯನ್ನು ಏಪ್ರಿಲ್ 20 ರಂದು ಮುಂದುವರಿಸುವುದಾಗಿ ನ್ಯಾಯಾಲಯ ಹೇಳಿದೆ. ನ್ಯಾಯಾಧೀಶ ಬವೇಜಾ ಅವರು ಸಿಸೋಡಿಯಾ ಪರ ವಕೀಲರು ಮತ್ತು ಕೇಂದ್ರೀಯ ತನಿಖಾ



ದಳ (ಸಿಬಿಐ) ಮತ್ತು ಜಾರಿ ನಿರ್ದೇಶನಾಲಯ (ಇಡಿ) ಪರ ವಾದ ಮಂಡಿಸಿದ್ದರು. ಇದಕ್ಕೂ ಮೊದಲು, ಸಿಸೋಡಿಯಾ ಮತ್ತು ಇತರ ಆರೋಪಿಗಳು ಪ್ರಕರಣದ ವಿಚಾರಣೆಯನ್ನು ವಿಳಂಬಗೊಳಿಸುತ್ತಿದ್ದಾರೆ ಎಂದು ಇಡಿ ಆರೋಪಿಸಿತ್ತು.

ಪ್ರಕರಣದ ತನಿಖೆಯನ್ನು ಪೂರ್ಣಗೊಳಿಸಲು ವಿಳಂಬವಾಗಿದೆ ಎಂದು ಆರೋಪಿಸಿ ಸಿಸೋಡಿಯಾ ಅವರ ವಕೀಲ ಮೋಹಿತ್ ಮಾಥುರ್ ಅವರು ಜಾಮೀನು ಅರ್ಜಿಯನ್ನು ಸಲ್ಲಿಸಿದರು, ತಮ್ಮ ಕಕ್ಷಿದಾರರು ಲಂಚದ ಹಣಕ್ಕೆ ಸಂಬಂಧಿಸಿರುವ ಯಾವುದೇ ಪುರಾವೆಗಳು ಕಂಡುಬಂದಿಲ್ಲ ಎಂದು ಪ್ರತಿಪಾದಿಸಿದರು. ಅಪರಾಧದ ಆಪಾದಿತ ಆದಾಯವು ಖಜಾನೆ ಅಥವಾ ಖಾಸಗಿ ಗ್ರಾಹಕರಿಗೆ ಯಾವುದೇ ನಷ್ಟವನ್ನು ಉಂಟುಮಾಡುವುದಿಲ್ಲ ಎಂದು ಅವರು ವಾದಿಸಿದ್ದರು. ಮಾಥುರ್ ಅವರು ವಿಚಾರಣೆಯ ವಿಳಂಬವನ್ನು ಒತ್ತಿ ಹೇಳಿದರು, ಸಿಸೋಡಿಯಾ ಅವರಿಗೆ ನ್ಯಾಯಾಲಯವನ್ನು ಸಂಪರ್ಕಿಸಲು ಅವಕಾಶ ನೀಡುವ ಸುಪ್ರೀಂ ಕೋರ್ಟ್‌ನ ಆದೇಶವು ಆರು ತಿಂಗಳ ಹಳೆಯದು ಮತ್ತು ತನಿಖೆಯು ಇಷ್ಟೊತ್ತಿಗೆ ಪೂರ್ಣಗೊಂಡಿರಬೇಕು ಎಂದು ಹೇಳಿದರು.

ಪ್ರಕರಣದ ಇನ್ನೋರ್ವ ಆರೋಪಿ ಬೆನೊಯ್ ಬಾಬುಗೆ ಜಾಮೀನು ನೀಡಿರುವುದನ್ನು ಉಲ್ಲೇಖಿಸಿ ಮಾಥುರ್ ಅವರು ಸಿಸೋಡಿಯಾ ಜಾಮೀನಿಗೆ ವಾದಿಸಿದರು, ಅವರು ಇನ್ನು ಮುಂದೆ ಪ್ರಭಾವದ ಸ್ಥಾನವನ್ನು ಹೊಂದಿಲ್ಲ ಎಂದು ಹೇಳಿದ್ದಾರೆ.

ಸುಪ್ರೀಂ ಕೋರ್ಟ್‌ನಲ್ಲಿ ವಿವರಿಸಿದಂತೆ ಸಿಸೋಡಿಯಾ ಜಾಮೀನಿಗಾಗಿ ತ್ರಿವಳಿ ಪರೀಕ್ಷೆಯನ್ನು ಎದುರಿಸಿದರು ಮತ್ತು ತ್ವರಿತ ವಿಚಾರಣೆಗೆ ಒತ್ತಾಯಿಸಿದರು ಎಂದು ಅವರು ಒತ್ತಿ ಹೇಳಿದರು. ಸುಪ್ರೀಂ ಕೋರ್ಟ್‌ನ ಮಾರ್ಗಸೂಚಿಗಳ ಪ್ರಕಾರ ಎಲ್ಲಾ ಅಗತ್ಯ ಷರತ್ತುಗಳನ್ನು ಪೂರೈಸಿ ಮತ್ತು ಯಾವುದೇ ಸ್ವಾತಂತ್ರ್ಯದ ದುರುಪಯೋಗದ ಅನುಪಸ್ಥಿತಿಯಲ್ಲಿ ಸಿಸೋಡಿಯಾ ಅವರ ಜಾಮೀನು ಅರ್ಹತೆಯನ್ನು ಸ್ಥಾಪಿಸಲಾಗಿದೆ ಎಂದು ಮಾಥುರ್ ಹೇಳಿದ್ದಾರೆ. ಇದಕ್ಕೂ ಮುನ್ನ ಸಿಬಿಐ ವಕೀಲರು, ತನಿಖೆ ನಿರ್ಣಾಯಕ ಹಂತದಲ್ಲಿದ್ದು, ಸಿಸೋಡಿಯಾ ಅವರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡುವುದರಿಂದ ನಡೆಯುತ್ತಿರುವ ತನಿಖೆಗೆ ಅಡ್ಡಿಯಾಗಬಹುದು ಎಂದು ನ್ಯಾಯಾಲಯಕ್ಕೆ ತಿಳಿಸಿದ್ದರು.

## ಸಂಪ್ರದಾಯಗಳನ್ನು ತಿಳಿಸಿಕೊಡುವ ಕಾರ್ಯವಾಗುತ್ತಿಲ್ಲ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಯಾವುದೇ ಊರಿಗೆ ಒಳ್ಳೆಯ ಹೆಸರು ಬರುವದಕ್ಕೆ ಅಲ್ಲಿನ ಶಿಕ್ಷಣ ಸಂಸ್ಥೆಗಳು ಕಾರಣವಾಗುತ್ತವೆ. ಉತ್ತಮ ಶಿಕ್ಷಣ ನಮ್ಮ ಭಾಗದಲ್ಲಿ ಅತಿ ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ಶ್ರೀಮತಿ ಮೀನಾಕ್ಷಿ, ಶ್ರೀ ಮಹಾಬಳೇಶ್ವರಪ್ಪ ಬೇವಿನಮರದ ಎಜ್ಯುಕೇಷನ್ ಟ್ರಸ್ಟ್ ಮೌಲ್ಯಯುತ ಸಂಸ್ಕಾರ, ಸಂಸ್ಕೃತಿಯ ಶಿಕ್ಷಣ ಪದ್ಧತಿಯನ್ನು ಬೆಳೆಸುವ ಉದ್ದೇಶದಿಂದ ವಿದ್ಯಾಪೀಠ ಪಾಠಶಾಲಾ ಪ್ರಾರಂಭಿಸುತ್ತಿದ್ದೇವೆ ಎಂದು ಟ್ರಸ್ಟ್‌ನ ಅಧ್ಯಕ್ಷ ಮಹಾಬಳೇಶ್ವರಪ್ಪ ಬೇವಿನಮರದ ಹೇಳಿದರು.

ಅವರು ಪಟ್ಟಣದಲ್ಲಿ ಸಂಸ್ಥೆಯ ಪ್ರಾರಂಭದ ಕುರಿತು ಕರೆಯಲಾಗಿದ್ದ ಪತ್ರಿಕಗೋಷ್ಠಿಯಲ್ಲಿ ಮಾತನಾಡಿದರು. ನಮ್ಮ ಭಾರತೀಯ ಸಂಸ್ಕೃತಿ, ಪರಂಪರೆ ಇಂದಿನ ಮಕ್ಕಳಿಂದ ದೂರವಾಗುತ್ತಿದ್ದು, ನಮ್ಮ ಸಂಪ್ರದಾಯಗಳನ್ನು ತಿಳಿಸಿಕೊಡುವ ಕಾರ್ಯವಾಗುತ್ತಿಲ್ಲ. ಈ ಉದ್ದೇಶದಿಂದ ಈ ಭಾಗದ ಪಟ್ಟಣ, ಗ್ರಾಮೀಣ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡುವದು ನಮ್ಮ ಸಂಸ್ಥೆಯ ಉದ್ದೇಶವಾಗಿದೆ. ಸುಮಾರು 4 ಎಕರೆ ವಿಶಾಲವಾದ ಪ್ರದೇಶದಲ್ಲಿ ಶಿಕ್ಷಣ ಇಲಾಖೆಯ ನಿಯಮಗಳಡಿಯಲ್ಲಿ ನಿರ್ಮಾಣಗೊಂಡಿರುವ ಸುಸಜ್ಜಿತ ಶಾಲಾ ಕಟ್ಟಡದಲ್ಲಿ ಭಾರತೀಯ ಪರಂಪರೆಯ ಗುರುಕುಲ ಮಾದರಿಯ ಯೋಗ, ಧ್ಯಾನ, ಪ್ಲಾಸ್ಟಿಕ್ ಮುಕ್ತ, ಜಂಕ್ ಫುಡ್‌ನಿಂದ ಮಕ್ಕಳನ್ನು ದೂರ ಇಡುವದು ಸೇರಿದಂತೆ ಕ್ರೀಡೆಗೆ ಆದ್ಯತೆ ನೀಡುವ ಶಿಕ್ಷಣವನ್ನು ಇಲ್ಲಿ ನೀಡಲಾಗುತ್ತಿದ್ದು, ಸಾರ್ವಜನಿಕರ ಸಹಕಾರ ಮಹತ್ವದ್ದಾಗಿದೆ ಎಂದರು.

ನಿವೃತ್ತ ಶಿಕ್ಷಕ ಸಿ.ಜಿ. ಹಿರೇಮಠ ಮಾತನಾಡಿ, ಅಂಕಗಳ ಆಧಾರದಲ್ಲಿ ಮಗುವಿಗೆ ಒತ್ತಡದ ಶಿಕ್ಷಣ ನೀಡುವದು ಈ ಸಂಸ್ಥೆಯ ಉದ್ದೇಶವಲ್ಲ. ಮಾನವೀಯ ಮೌಲ್ಯಗಳಿಂದ ಕೂಡಿದ ಶಿಕ್ಷಣವನ್ನು ಇಲ್ಲಿ ನೀಡಲಾಗುತ್ತದೆ. ಈಗಾಗಲೇ ವಿದ್ಯಾಪೀಠ ಪಾಠಶಾಲೆಗೆ ಪ್ರವೇಶಗಳು ಪ್ರಾರಂಭವಾಗಿದ್ದು, ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಪಾಲಕರು ಆದ್ಯತೆ ನೀಡಿ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಚಂದ್ರಣ್ಣ ಓದುನವರ, ಸಿದ್ದನಗೌಡ ಬಳ್ಳೊಳ್ಳಿ, ಕೆಂಚಕ್ಕನವರ, ಅನಂತರಾಜ ಮಿಣಜಗಿ, ಕಾರ್ಯದರ್ಶಿ ವಸಂತ ಬೇವಿನಮರದ, ಅಶೋಕಗೌಡ ಪಾಟೀಲ, ಲಕ್ಷ್ಮಣ ಉಪಾಧ್ಯ ಹಾಜರಿದ್ದರು.

## ಜೋಳ ಖರೀದಿ ನೋಂದಣಿ ವಿಸ್ತರಿಸಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಮಾರ್ಚ್ 27ರಿಂದ ಪ್ರಾರಂಭವಾಗಿದ್ದ ರೈತರ ಜೋಳ ಖರೀದಿ ನೋಂದಣಿ ಕಾರ್ಯಕ್ರಮವನ್ನು ಮುಂದುವರಿಸುವಂತೆ ಆಗ್ರಹಿಸಿ ಭಾರತಿಯ ಕಿಸಾನ್ ಸಂಘದಿಂದ ತಹಸೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾ ಭಾರತಿಯ ಕಿಸಾನ್ ಸಂಘದ ಅಧ್ಯಕ್ಷ ಟಾಕಪ್ಪ ಸಾತಪುತೆ, ತಾಲೂಕಿನಲ್ಲಿ ರೈತರ ಅನುಕೂಲಕ್ಕಾಗಿ ಜೋಳದ ಖರೀದಿ ಕೇಂದ್ರ ಸ್ಥಾಪಿಸಿದ್ದು ಅನುಕೂಲವಾಗಿತ್ತು. ಆದರೆ, ಪ್ರಾರಂಭದಿಂದ ಇಂದಿನವರೆಗೆ ತಾಲೂಕಿನ ಕೇವಲ 25 ರೈತರು ಮಾತ್ರ ನೋಂದಣಿ ಮಾಡಿಕೊಂಡಿದ್ದಾರೆ. ಏಪ್ರಿಲ್ 16ರಂದು ಸದರಿ ನೋಂದಣೆ ಕಾರ್ಯ ಸ್ಥಗಿತಗೊಂಡಿದ್ದು, ಇದ-ರಿಂದ ರೈತರಿಗೆ ತೊಂದರೆಯಾಗಿದೆ. ಕೂಡಲೇ ನೋಂದಣಿ ಅವಧಿ ವಿಸ್ತರಿಸುವ ಮೂಲಕ ರೈತರಿಗೆ ಅನೂಕೂಲ ಮಾಡಿಕೊಡಬೇಕು ಎಂದರು.

ಕೆಲವು ರೈತರಿಗೆ ಜಿಪಿಎಸ್ ಬಗ್ಗೆ ಮಾಹಿತಿ ಇಲ್ಲದ ಕಾರಣ ತಮ್ಮ ಹೊಲದ ಜಿಪಿಎಸ್ ಮಾಡಿಸಿಲ್ಲ. ಕಾರಣ, ಸಂಬಂಧಿಸಿದ ಅಧಿಕಾರಿಗಳು ಮಾಹಿತಿ ಇಲ್ಲದ ರೈತರ ಹೊಲಗಳಿಗೆ ತೆರಳಿ ಜಿಪಿಎಸ್ ಮಾಡಿಸಲು ಅವಕಾಶ ಮಾಡಿಕೊಡಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಫಕ್ಕೀರಪ್ಪ ಚಿಕ್ಕಣ್ಣನವರ, ಬಸವಣೆಪ್ಪ ಚಿಕ್ಕಣ್ಣನವರ, ಮಹಾದೇವಪ್ಪ ಹುಲಗೂರ, ಶಂಕ್ರಪ್ಪ ಅಣ್ಣಿಗೇರಿ, ಯಲ್ಲಪ್ಪ ಅಣ್ಣಿಗೇರಿ, ಬಸವರಾಜ ಸಂಬಾಜಿ, ಫಕ್ಕೀರಪ್ಪ ಮಾಳಗಿಮನಿ, ಬಸನಗೌಡ್ರ ಪಾಟೀಲ್ ಮುಂತಾದವರಿದ್ದರು.




ಹಾವೇರಿ-ಗದಗ ಲೋಕಸಭಾ ಕ್ಷೇತ್ರದಿಂದ ಎಕಂ ಸನಾತನ ಭಾರತ ದಳದ ಅಭ್ಯರ್ಥಿಯಾಗಿ ವಿಶ್ವನಾಥ ಶೀರಿ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಅವರಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಪೂಜಾರ ವೀರಮಲ್ಲಪ್ಪ, ನಾಗರಾಜ ಸೂರಣಗಿ, ಕಿರಣ ಕಬಾಡಿ, ಶ್ರೀಕಾಂತ ಜವಳಿ ಮುಂತಾದವರು ಉಪಸ್ಥಿತರಿದ್ದರು.

### ಚುನಾವಣೆ ಸಿದ್ಧತೆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದ ಚುನಾವಣಾ ಸಾಮಾನ್ಯ ವೀಕ್ಷಕರು

# ಮತದಾನ ದಿನದ ಸಿದ್ಧತೆಗಳನ್ನು ಖಚಿತಪಡಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಚುನಾವಣಾ ಸಾಮಾನ್ಯ ವೀಕ್ಷಕರಾಗಿ ಆಗಮಿಸಿರುವ ಅಜಯ ಗುಪ್ತಾ ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಚುನಾವಣಾಧಿಕಾರಿ ಹಾಗೂ ಜಿಲ್ಲೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ಧಾರವಾಡ ಲೋಕಸಭಾ ಮತಕ್ಷೇತ್ರದ ಬಗ್ಗೆ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳ ಅನ್ವಯ ಮತದಾನ ಪೂರ್ವದ ಮತ್ತು ಮತದಾನ ದಿನದ ಸಿದ್ಧತೆಗಳನ್ನು ಖಚಿತಪಡಿಸಿಕೊಳ್ಳಬೇಕು. ಚುನಾವಣಾಧಿಕಾರಿಗಳು ಸೇರಿದಂತೆ ಎಲ್ಲ ನಿಯೋಜಿತ ಅಧಿಕಾರಿಗಳು ಅನುಭವಿಕರಿದ್ದು, ಉತ್ತಮ ರೀತಿಯಲ್ಲಿ ಕಾರ್ಯ ಮಾಡುವಿರೆಂಬ ಭರವಸೆ ಇದೆ. ಚುನಾವಣೆಯ ಎಲ್ಲ ಕಾರ್ಯ ಸಿದ್ಧತೆಗಳನ್ನು ಪರಿಶೀಲಿಸಲಾಗಿದ್ದು, ನಿಯಮಾನುಸಾರವಿದೆ ಎಂದರು.

ಸುವಿಧಾ ಮತ್ತು ಸಿ-ವಿಜಿಲ್ ಆ್ಯಪ್ ಸೌಲಭ್ಯಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಿ, ಸಾರ್ವಜನಿಕರಲ್ಲಿ ಸುವಿಧಾ ಮತ್ತು ಸಿ-ವಿಜಿಲ್ ಬಳಕೆ ಬಗ್ಗೆ ಅರಿವು ಮೂಡಿಸಬೇಕು ಎಂದು ಸೂಚಿಸಿದರು.




ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಧಾರವಾಡ ಮತಕ್ಷೇತ್ರದಲ್ಲಿ ಸಾರ್ವತ್ರಿಕ ಚುನಾವಣೆಯು ಶಾಂತಿಯುತ, ಮುಕ್ತ, ನ್ಯಾಯಸಮ್ಮತವಾಗಿ ಜರುಗಿಸಲು ಕೈಗೊಂಡಿರುವ ಕ್ರಮಗಳನ್ನು ವಿವರಿಸಿದರು. ಸಿ-ವಿಜಿಲ್ ಮೂಲಕ ಇಲ್ಲಿಯವರೆಗೆ 1,757 ದೂರುಗಳು ಸ್ವೀಕೃತವಾಗಿದ್ದು, ನಿಗದಿತ 100 ನಿಮಿಷಗಳ ಕಾಲಮಿತಿಯಲ್ಲಿ ಎಲ್ಲ ದೂರುಗಳನ್ನು ನಿಯಮಾನುಸಾರ ಪರಿಹರಿಸಿ, ವಿಲೇವಾರಿ ಮಾಡಲಾಗಿದೆ. ಸುವಿಧಾ ಮೂಲಕ ಈವರೆಗೆ ಸಲ್ಲಿಸಿದ್ದ 135 ಅರ್ಜಿಗಳನ್ನು ಪರಿಶೀಲಿಸಿ, ನಿಯಮಾನುಸಾರ ಅನುಮತಿಸಿ, ವಿಲೇವಾರಿ ಮಾಡಲಾಗಿದೆ ಎಂದು ದಿವ್ಯ ಪ್ರಭು ತಿಳಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ ಮಾತನಾಡಿ, ಜಿಲ್ಲೆಯ ಎಲ್ಲ ನಗರಗಳಲ್ಲಿ ಪೊಲೀಸ್ ಸಿಬ್ಬಂದಿ ಹಾಗೂ ರಕ್ಷಣಾ ಪಡೆಯೊಂದಿಗೆ ಪಥ ಸಂಚಲನ ಮಾಡಿ, ಜನರಲ್ಲಿ ಸುವ್ಯವಸ್ಥಿತ ಚುನಾವಣೆಯ ಬಗ್ಗೆ ಆತ್ಮ ವಿಶ್ವಾಸ, ಸ್ಥೈರ್ಯ ಹೆಚ್ಚಿಸಲಾಗಿದೆ. ಜಿಲ್ಲೆಯಲ್ಲಿ ಶಾಂತಿಯುತ, ಸುವ್ಯವಸ್ಥಿತ, ನ್ಯಾಯಸಮ್ಮತ ಚುನಾವಣೆಗೆ ಅಗತ್ಯ ಬಂದೋಬಸ್ತ್ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ, ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ. ಮಾತನಾಡಿ, ಜಿಲ್ಲೆಯಾಂದ್ಯತ ಮತದಾರ ಜಾಗೃತಿ ಕಾರ್ಯಕ್ರಮಗಳನ್ನು ಸಂಘಟಿಸಲಾಗುತ್ತಿದೆ. ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಧಾರವಾಡ ಲೋಕಸಭಾ ಮತಕ್ಷೇತ್ರದಲ್ಲಿ ಶೇ. 75ಕ್ಕಿಂತ ಹೆಚ್ಚು ಮತದಾನ ಮಾಡಿಸುವ ಗುರಿ ಹೊಂದಲಾಗಿದೆ ಎಂದು

ಸಭೆಯಲ್ಲಿ ಮಾದರಿ ನೀತಿ ಸಂಹಿತೆ ಜಿಲ್ಲಾ ನೋಡಲ್ ಅಧಿಕಾರಿ ಮೋನಾ ರೋತ್, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಆದಾಯ ತೆರಿಗೆ ಇಲಾಖೆ ಅಧಿಕಾರಿ ಪಕೀರೇಶ ಬಾದಾಮಿ, ಜಿಲ್ಲಾ ವೆಚ್ಚ ನೋಡಲ್ ಅಧಿಕಾರಿ ವಿಶ್ವನಾಥ ಪಿ.ಬಿ., ಅಂಚೆ ಮತದಾನ ನೋಡಲ್ ಅಧಿಕಾರಿ ಮೋಹನ ಶಿವಣ್ಣವರ, ಸುವಿಧಾ ನೋಡಲ್ ಅಧಿಕಾರಿ ರೇಷ್ಮಾ ತಾಳಿಕೋಟಿ, ಜಿಲ್ಲಾಧಿಕಾರಿಗಳ ಕಚೇರಿ ನೋಡಲ್ ಅಧಿಕಾರಿ ಅನುರಾಧಾ ವಸ್ತ್ರದ, ಸಿ-ವಿಜಿಲ್ ನೋಡಲ್ ಅಧಿಕಾರಿ ಅನೀಸ್ ನಾಯಕ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು, ಚುನಾವಣಾ ವಿಭಾಗದ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ಮಾತನಾಡಿ, ಮಹಾನಗರ ವ್ಯಾಪ್ತಿಯಲ್ಲಿ ಶಾಂತಿಯುತವಾಗಿ ಮತ್ತು ಮುಕ್ತವಾಗಿ ಚುನಾವಣೆ ಜರುಗಿಸಲು ಅಗತ್ಯ ಬಂದೋಬಸ್ತ್ ಮಾಡಲಾಗಿದೆ. ಪೊಲೀಸ್ ಸಿಬ್ಬಂದಿಯೊಂದಿಗೆ ಅರೆ ಸೇನಾ ಪಡೆ, ಮೀಸಲು ಪಡೆ, ಹೋಂ ಗಾರ್ಡ್‌ಗಳನ್ನು ನಿಯೋಜಿಸಲಾಗುತ್ತದೆ. ಲೈಸನ್ಸ್ ಪಡೆದಿರುವ 865 ಗನ್‌ಗಳನ್ನು ನಿಯಮಾನುಸಾರ ವಶಕ್ಕೆ ಪಡೆದು, ಆಯಾ ಪೊಲೀಸ್ ಠಾಣೆಗಳಲ್ಲಿ ಠೇವಣಿ ಮಾಡಲಾಗಿದೆ. 88 ಗನ್‌ಗಳಿಗೆ ಕಾನೂನು ಪ್ರಕಾರ ವಿನಾಯಿತಿ ನೀಡಲಾಗಿದೆ. ಈಗಾಗಲೇ ಹಲವು ಅಪರಾಧ ಪ್ರಕರಣಗಳಲ್ಲಿ ಭಾಗಿ ಆಗಿರುವ 21 ಜನ ಆರೋಪಿಗಳನ್ನು ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಿಂದ ಗಡಿಪಾರು ಮಾಡಿ ಆದೇಶಿಸಲಾಗಿದೆ ಎಂದು ತಿಳಿಸಿದರು.

# ಅಧಿಕಾರಿಗಳ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘನೆ ಮಾಡಿದ ಲಕ್ಷ್ಮೇಶ್ವರ ಪುರಸಭೆಯ ಮುಖ್ಯಾಧಿಕಾರಿ ಹಾಗೂ ಕಿರಿಯ ಆರೋಗ್ಯ ನಿರೀಕ್ಷಕರ ಮೇಲೆ ಶಿಸ್ತು ಕ್ರಮ ಜರುಗಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣದ ತಾಲೂಕಾಧ್ಯಕ್ಷ ಮಹೇಶ ಕಲಘಟಗಿ ಹೇಳಿದರು.

ಈ ಬಗ್ಗೆ ತಹಸೀಲ್ದಾರ ಕಚೇರಿಯಲ್ಲಿ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಅವರಿಗೆ ಮನವಿ ಸಲ್ಲಿಸಿ ಮಾತನಾಡುತ್ತ, ಏಪ್ರಿಲ್ 17ರ ಸಂಜೆ ವಾರುಕಟ್ಟೆಯಲ್ಲಿ ಲಕ್ಷ್ಮೇಶ್ವರ ಪುರಸಭೆಯ ಮುಖ್ಯಾಧಿಕಾರಿ ಸಂಚಾರಿದಳ ಅಧಿಕಾರಿ ಮತ್ತು ಕಿರಿಯ ಆರೋಗ್ಯ ನಿರೀಕ್ಷಕರು ಜೊತೆಯಾಗಿ ಕಸದ ಬುಟ್ಟಿ ವಿತರಣೆ ಕಾರ್ಯಕ್ರಮ ನಡೆಸಿದ್ದಾರೆ. ಈ ಇಬ್ಬರೂ ಜಿಲ್ಲೆಯ ಅಧಿಕಾರಿಗಳಾಗಿದ್ದಾರೆ. ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಸರ್ಕಾರದ ಯಾವುದೇ ಯೋಜ ನೆಗಳನ್ನು ಅನುಷ್ಠಾನ ಗೊಳಿಸುವುದು ಅಪರಾಧ ವಾಗಿರುತ್ತದೆ. ಈ ಇಬ್ಬರೂ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶ್ರೇಯಾಂಕ ಹಿರೇಮಠ, ನವೀನ ಗುರಿಕಾರ, ಪ್ರವೀಣ ದಶಮನಿ, ಮಂಜುನಾಥ ಗಾಂಜಿ, ಅಂಬರೀಶ ಗಾಂಜಿ, ಮಹಾಂತೇಶ ಗುರಿಕಾರ, ಚಂದ್ರು ಪಾಣಿಗಟ್ಟಿ, ಈಶ್ವರಗೌಡ ಪಾಣಿಗಟ್ಟಿ, ಬಸನಗೌಡ ಮನ್ನಂಗಿ, ತೇಜು ರವಿ ಗುರಿಕಾರ, ಮಲ್ಲನಗೌಡ ಪಾಟೀಲ, ಶಿವರಾಜ್ ಬಾಳಿಹಳ್ಳಿಮಠ, ವೀರೇಶ ಹಗ್ಗರದ, ಬಸನಗೌಡ ಅಡರಕಟ್ಟಿ ಮುಂತಾದವರಿದ್ದರು.



### ಶ್ರೀ ಕೊಟ್ಟೂರುಸ್ವಾಮಿ ಐಟಿಐ ಕಾಲೇಜಿನ 'ಉದ್ಯೋಗ ಮೇಳ'ದಲ್ಲಿ ವಿ.ಬಿ. ಸೋಮನಕಟ್ಟಿಮಠ

# ತರಬೇತಿಯೊಂದಿಗೆ ಭವಿಷ್ಯವನ್ನು ರೂಪಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬೆಂಗಳೂರಿನ ಬಿಡದಿಯ ಟೋಯೋಟಾ ಕಂಪನಿಯವರು ಧಾರವಾಡದ ಕನೆಕ್ಟ್ ಸಂಸ್ಥೆಯ ಮೂಲಕ ನಿಮಗೆ ಕೌಶಲ್ಯ ಪರಿಣಿತಿಯನ್ನು ನೀಡಲು ಬಂದಿದ್ದಾರೆ. ಮನೆ ಬಾಗಿಲಿಗೆ ಬಂದಿರುವ ಈ ಅವಕಾಶವನ್ನು ನೀವು ಸದುಪಯೋಗಪಡಿಸಿಕೊಂಡು ನಿಮ್ಮ ಜೀವನವನ್ನು ಉತ್ತಮಗೊಳಿಸಿಕೊಳ್ಳಿ ಎಂದು ಪಟ್ಟಣದ ಶ್ರೀ ಕೊಟ್ಟೂರುಸ್ವಾಮಿ ಐಟಿಐ ಕಾಲೇಜಿನ ಚೇರಮನ್ ವಿ.ಬಿ. ಸೋಮನಕಟ್ಟಿಮಠ ಹೇಳಿದರು.

ಗುರುವಾರ ಕಾಲೇಜಿನಲ್ಲಿ ಧಾರವಾಡದ ಕನೆಕ್ಟ್ ಸಂಸ್ಥೆಯವರು ನಡೆಸಿದ ಉದ್ಯೋಗ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಹಿಂದೆ ಇಂತಹ ಸೌಲಭ್ಯಗಳು ಇರಲಿಲ್ಲ. ಈಗ ಅನೇಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ನಿಮ್ಮ ಮನೆ ಬಾಗಿಲಿಗೆ ಬರುತ್ತಿವೆ. ನಮ್ಮ ಶ್ರೀ ಕೊಟ್ಟೂರು ಸ್ವಾಮಿ ಐಟಿಐನ ಪ್ರಾಚಾರ್ಯರು ಮತ್ತು ಸಿಬ್ಬಂದಿಯವರು ನಿಮಗೆ ಇಂಥದ್ದೊಂದು ಅವಕಾಶವನ್ನು ಒದಗಿಸಿಕೊಟ್ಟಿದ್ದು, ಈ ಮೂಲಕ ನಿಮ್ಮ ಜೀವನದ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ಹೇಳಿದರು.




ಬರುವ ಜೂನ್ ತಿಂಗಳಲ್ಲಿ ಇನ್ನಷ್ಟು ಹೆಚ್ಚಿನ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವಂತೆ ಮಾಡಿ, ಸಹಸ್ರಾರು ಜನರಿಗೆ ಉದ್ಯೋಗ ದೊರಕುವಂತೆ ಮಾಡುವುದು ನಮ್ಮ ಗುರಿಯಾಗಿದೆ. ಇದಕ್ಕೆ ನಮ್ಮ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರ ಆಶೀರ್ವಾದವೂ ಇದೆ ಎಂದು ಸೋಮನಕಟ್ಟಿ ತಿಳಿಸಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ನೀವು ಪಡೆದ ತರಬೇತಿ ಫಲಪ್ರದವಾಗಬೇಕಾದರೆ ಇಂತಹ ಕೌಶಲ್ಯಾಧಾರಿತ ಪ್ರಾಯೋಗಿಕ ತರಬೇತಿನಿಮಗೆ ಅವಶ್ಯಕ. ನಿಮ್ಮ ಮನೆತನವನ್ನು ಆರ್ಥಿಕವಾಗಿ ಸಬಲಪಡಿಸಲು ನೀವು ಈ ತರಬೇತಿಯನ್ನು ಪಡೆದುಕೊಳ್ಳಿ. ಸಿಕ್ಕ ಅವಕಾಶವನ್ನು ಬಳಸಿಕೊಂಡು ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದರು.

ಪ್ರಾಚಾರ್ಯ ಬಸವರಾಜ ಜೋಳದ ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮ ಐಟಿಐನಲ್ಲಿ ಒಟ್ಟು ಫಿಟ್ಟರ್, ಇಲೆಕ್ಟ್ರಿಶಿಯನ್, ಇಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ಸ್, ಹೊಲಿಗೆ, ವೈರ್‌ಮನ್ ಹಾಗೂ ಪ್ಲಂಬರ್ ಹೀಗೆ ಆರು ಟ್ರೇಡ್‌ಗಳಿದ್ದು, ನಿಮಗೆ ಇಷ್ಟವಾಗುವ ಟ್ರೇಡ್‌ನ್ನು ಆಯ್ಕೆ ಮಾಡಿಕೊಳ್ಳಬಹುದು ಎಂದರು.

ಎಸ್.ಎಂ. ಕಮ್ಮಾರ ಸ್ವಾಗತಿಸಿದರು. ಸುಮಾ ಸೋಮನಕಟ್ಟಿಮಠ ನಿರೂಪಿಸಿದರು. ನಾಗರಾಜ ಗುಡದಾರಿ ವಂದಿಸಿದರು.

ಕನೆಕ್ಟ್ ಸಂಸ್ಥೆಯ ಎಚ್.ಆರ್ ಮಲ್ಲಿಕಾರ್ಜುನ ಗೊಂಡಬಾಳ ಮಾತನಾಡಿ, ಈ ಅಪ್ರೆಂಟಿಸ್ ತರಬೇತಿಯು ಒಂದು ವರ್ಷದ್ದಾಗಿದ್ದು, ಈ ಸಮಯದಲ್ಲಿ ಕಂಪನಿಯ ವತಿಯಿಂದ ನೀವು 16875 ರೂ.ಗಳ ಸ್ಟೈಪೆಂಡ್‌ನ್ನು ಪಡೆಯುತ್ತೀರಿ. ನೀವು ನಿಗದಿತ ಸಮಯಕ್ಕಿಂತ ಹೆಚ್ಚಿನ ಅವಧಿ ದುಡಿದರೆ ನಿಮಗೆ ಬೋನಸ್ ರೂಪದಲ್ಲಿ ಹೆಚ್ಚಿನ ವೇತನ ದೊರೆಯಲಿದೆ. ತರಬೇತಿ ಸಮಯದಲ್ಲಿ ಉಚಿತ ಸಾರಿಗೆ, ಊಟ, ಸಮವಸ್ತ್ರ ಮುಂತಾದವುಗಳನ್ನು ನೀಡಲಾಗುತ್ತಿದೆ ಎಂದರು.

### ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಾನವ ಜೀವನಕ್ಕೆ ಧರ್ಮವೇ ದಿಕ್ಸೂಚಿ

**■ವಿಜಯಸಾಕ್ಷಿ ಸುದ್ದಿ, ಅಫಜಲಪುರ**

ಭಗವಂತನ ಸೃಷ್ಟಿಯಲ್ಲಿ ಮಾನವ ಜನ್ಮಕ್ಕೆ ಬಹಳಷ್ಟು ಪ್ರಾಮುಖ್ಯತೆಯನ್ನು ಕೊಟ್ಟಿದ್ದಾರೆ. ಮನುಷ್ಯನಿಗೆ ಇರುವ ತಿಳುವಳಿಕೆ ಇತರ ಪ್ರಾಣಿ-ಪಕ್ಷಿಗಳಿಗೆ ಇಲ್ಲದೆ ಇರುವುದು ವಿಶೇಷ. ಮನುಷ್ಯನಾಗಿ ಅರಿತು ಬಾಳುವುದರಲ್ಲಿ ಜೀವನದ ಶ್ರೇಯಸ್ಸು ಇದೆ ಎಂದು ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಕರಜಿಗಿ ಗ್ರಾಮದಲ್ಲಿ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಗೋಪುರ ಕಳಸಾರೋಹಣದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದೆ ಹೋದರೆ ಮಾನವ ಜೀವನ ವ್ಯರ್ಥವಾಗುತ್ತದೆ. ಅರಿವುಳ್ಳ ಮಾನವ ಜನ್ಮದಲ್ಲಿ ಬಂದ ಬಳಿಕ ಒಂದಿಷ್ಟಾದರೂ ಶಿವಜ್ಞಾನ ಮತ್ತು ಗುರು ಕಾರುಣ್ಯ ಪಡೆದು ಬಾಳಿದರೆ ಜೀವನ ಸಾರ್ಥಕವಾಗುತ್ತದೆ.




ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ ಬದುಕಿಗೆ ಧರ್ಮದ ದಶವಿಧ ಸೂತ್ರಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ವೀರಶೈವ ಧರ್ಮದಲ್ಲಿ ಜಾತಿ, ಮತ, ಪಂಥಗಳೆನ್ನದೆ ಎಲ್ಲ ವರ್ಗದ ಜನತೆಗೆ ನೀತಿ ಬೋಧನಾತ್ಮಕವಾದ ಆದರ್ಶ ಮೌಲ್ಯಗಳನ್ನು ಬೋಧಿಸಿದ್ದನ್ನು ಎಂದಿಗೂ ಮರೆಯುವಂತಿಲ್ಲ. ಗ್ರಾಮದ ಜನತೆ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನ ನಿರ್ಮಿಸಿ ಗೋಪುರ ಕಳಸಾರೋಹಣ ಮಾಡಿರುವುದು ಶ್ರೀ ರಂಭಾಪುರಿ ಜಗದ್ಗುರುಗಳಿಗೆ ಅತ್ಯಂತ ಸಂತೋಷವನ್ನು ತಂದಿದೆ ಎಚಿದರಲ್ಲದೆ, ಗ್ರಾಮದ ಎಲ್ಲ ಜನತೆ ಶಾಚಿತಿ-ಸೌಹಾರ್ದತೆಯಿಂದ ಬದುಕಿ ಬಾಳಲು ಶ್ರೀ ರಂಭಾಪುರಿ ಜಗದ್ಗುರು ಕರೆ ನೀಡಿದರು.

ಸಮಾರಂಭದಲ್ಲಿ ಹಲವಾರು ಮಠಾಧೀಶರು ಮತ್ತು ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಂಭ್ರಮದ ಅಡ್ಡ ಪಲ್ಲಕ್ಕಿ ಮಹೋತ್ಸವ ಜರುಗಿತು. ಸಹಸ್ರಾರು ಭಕ್ತರು ಪಾಲ್ಗೊಂಡು ಜಗದ್ಗುರುಗಳ ದರ್ಶನ-ಆಶೀರ್ವಾದ ಪಡೆದರು.

ಸಮಾರಂಭದ ನೇತೃತ್ವವನ್ನು ವಹಿಸಿದ್ದ ಅಫಜಲಪುರ ಸಂಸ್ಥಾನ ಹಿರೇಮಠದ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಬದುಕಿ ಬಾಳುವ ಮನುಷ್ಯನಿಗೆ ಧರ್ಮವೊಂದೇ ಆಶಾಕಿರಣ. ಶ್ರೀ ರಂಭಾಪುರಿ ಪೀಠದ 'ಮಾನವ ಧರ್ಮಕ್ಕೆ ಜಯವಾಗಲಿ' ಅನ್ನುವ ಉದ್ಘೋಷಣೆ ಸಾಮರಸ್ಯ, ಸೌಹಾರ್ದತೆಗೆ ಸಾಕ್ಷಿಯಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಶುಭಾಗಮನ ಈ ಭಾಗದ ಎಲ್ಲ ಭಕ್ತರಿಗೆ ಶಾಂತಿ, ಸುಖ, ಸಮೃದ್ಧಿಯನ್ನು ಉಂಟು ಮಾಡಲೆಂದು ಹಾರೈಸಿದರು.

# ಕೋಟೆ ವೀರಭದ್ರೇಶ್ವರ ರಥೋತ್ಸವ ನಾಳೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಐತಿಹಾಸಿಕ ಕೋಟೆ ವೀರಭದ್ರೇಶ್ವರ ರಥೋತ್ಸವವು ಎಪ್ರಿಲ್ 20ರ ಸಂಜೆ ಸಂಭ್ರಮದಿಂದ ಜರುಗಲಿದೆ. 46ನೇ ವರ್ಷದ ರಥೋತ್ಸವಕ್ಕೆ ಸಂಜೆ 4 ಗಂಟೆಗೆ ಡೋಣಿ ನಂದಿವೇರಿಮಠದ ಶಿವಕುಮಾರ ಸ್ವಾಮೀಜಿಗಳು, ಹರ್ಲಾಪೂರ ಡಾ. ಕೊಟ್ಟೂರೇಶ್ವರ ಶ್ರೀಗಳು, ಲಕ್ಕುಂಡಿ ಅಲ್ಲಮಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಶ್ರೀಗಳು ಚಾಲನೆ ನೀಡುವರು.

ರಥೋತ್ಸವದಲ್ಲಿ ನಂದಿಕೋಲ ಮೇಳ, ಡೊಳ್ಳು ಮೇಳ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಭಾಗವಹಿಸುವವು. ಇದಕ್ಕೂ ಪೂರ್ವ ಮುಂಜಾನೆ 10ರಿಂದ 1ರವರೆಗೆ ಉಚಿತ ಆರೋಗ್ಯ ತಪಾಸಣೆ, ಚರ್ಮರೋಗ ತಪಾಸಣೆ, ಹೃದಯ ರೋಗ ತಪಾಸಣೆ ಹಾಗೂ ಉಚಿತ ರಕ್ತದಾನ ಶಿಬಿರ ಜರುಗಲಿದೆ.

ಏ.21ರಂದು ಗುಗ್ಗಳೋತ್ಸವ ಕಾರ್ಯಕ್ರಮ ನಡೆಯಲಿದ್ದು, ಪ್ಯಾಟಿ ಹನುಮಂತ ದೇವರ ದೇವಸ್ಥಾನದಿಂದ ಆರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ನಂತರ ದೇವಸ್ಥಾನದ ಮುಂದೆ ಅಗ್ನಿ ಕುಂಡದಲ್ಲಿ ಹಾಯುವ ಕಾರ್ಯಕ್ರಮ ಜರುಗಲಿದೆ. ಸಂಜೆ 5ಕ್ಕೆ ಪಲ್ಲಕ್ಕಿ ಉತ್ಸವ ಜರುಗಲಿದ್ದು, ರಥೋತ್ಸವದ ಅಂಗವಾಗಿ ಪ್ರತಿದಿನ ಪ್ರಾತಃಕಾಲ ರುದ್ರಾಭಿಷೇಕ ಜರುಗಲಿದೆ ಎಂದು ಜಾತ್ರಾ ಸೇವಾ ಸಮಿತಿಯ ಪ್ರಕಟಣೆ ತಿಳಿಸಿದೆ.

# 'ಪುಲಿಗೆರೆ ಉತ್ಸವ'ದ ಮೊದಲ ದಿನದ ಕಾರ್ಯಕ್ರಮಗಳು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ, ಇನ್ಫೋಸಿಸ್ ಪ್ರತಿಷ್ಠಾನ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಹಾಗೂ ಭಾರತೀಯ ವಿಧ್ಯಾಭವನ ಬೆಂಗಳೂರು ಇವರ ಸಹಕಾರದಲ್ಲಿ ಏಪ್ರಿಲ್ 19, 20 ಮತ್ತು 21ರಂದು ಪುಲಿಗೆರೆ ಉತ್ಸವ ನಡೆಯಲಿದೆ.

ದಿ.19ರಂದು ಶುಕ್ರವಾರ ಬೆಳಿಗ್ಗೆ 6 ಗಂಟೆಗೆ ಉದಯ ರಾಗ-1ರಲ್ಲಿ ಖ್ಯಾತ ಕಲಾವಿದ ಸರ್ಫರಾಜ್ ಖಾನ್ ಇವರಿಂದ ಸಾರಂಗಿ ವಾದನದೊಂದಿಗೆ ಕಾರ್ಯಕ್ರಮ ಆರಂಭವಾಗುವುದು. 7 ಗಂಟೆಗೆ ಖ್ಯಾತ ಹಿಂದುಸ್ಥಾನಿ ಸಂಗೀತ ಕಲಾವಿದೆ ಕುಮಟಾದ ರೇಷ್ಮಾಭಟ್ ಅವರಿಂದ ಹಿಂದೂಸ್ಥಾನಿ ಗಾಯನ ಜರುಗುವುದು.

ಸಂಜೆ 4 ಗಂಟೆಗೆ ವಿವಿಧ ವಾದ್ಯ ವೈಭವ, ಭಕ್ತರ ಸಮ್ಮಿಲನದೊಂದಿಗೆ ಅಲಂಕೃತ ಶ್ರೀ ಸೋಮೇಶ್ವರ ದೇವರ ಪಲ್ಲಕ್ಕಿ ಉತ್ಸವ ಜರುಗಲಿದೆ. ಸಂಜೆ 6 ಗಂಟೆಗೆ ಸಿದ್ದಾಪುರದ ಕೊಳಗಿ ಕೇಶವ ಹೆಗಡೆ ಮತ್ತು ತಂಡದವರಿಂದ ಯಕ್ಷಗಾನ ಜರುಗಲಿದೆ. ಸಂಜೆ 7 ಗಂಟೆಗೆ ಹಿರಿಯ ಸಂಗೀತ ಕಲಾವಿದ ಗಾಯಕ ಡಾ.ಅಶೋಕ ಹುಗ್ಗಣ್ಣವರ ಅವರಿಂದ ಹಿಂದೂಸ್ಥಾನಿ ಗಾಯನ ನಡೆಯಲಿದೆ. ಬಳಿಕ 8.30ಕ್ಕೆ ಬೆಂಗಳೂರಿನ ವಿ.ಕಾವ್ಯಾ ಕಾಶಿನಾಥನ್ ಮತ್ತು ಶಶಾಂಕ್ ಕಿರೋಣ ನಾಯರ್ ಅವರಿಂದ ಭರತನಾಟ್ಯ ಪ್ರದರ್ಶನ ನಡೆಯಲಿದೆ ಎಂದು ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ತಿಳಿಸಿದ್ದಾರೆ.

# ಶ್ರೀ ಭೀಮಾಂಬಿಕಾ ತಾಯಿ ನಾಡಿನ ಶ್ರೇಷ್ಠ ಶಿವಶರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಈ ನಾಡಿನ ಶ್ರೇಷ್ಠ ಶಿವಶರಣೆ ಇಟಗಿಯ ಶ್ರೀ ಭೀಮಾಂಬಿಕಾ ತಾಯಿಯ ಪವಾಡಗಳು ಇಂದಿಗೂ ಭಕ್ತರ ಮನದಲ್ಲಿ ಅಚ್ಚಳಿಯದೆ ಉಳಿದಿವೆ. ಶ್ರೀ ಭೀಮಾಂಬಿಕಾ ತಾಯಿಯ ಆಶೀರ್ವಾದ ಭಕ್ತರ ಮೇಲೆ ಸದಾ ಇರುತ್ತದೆ ಎಂದು ಸುಕ್ಷೇತ್ರ ಬಳಗಾನೂರಿನ ಪೂಜ್ಯ ಶ್ರೀ ಶಿವಶಾಂತವೀರ ಶರಣರು ಹೇಳಿದರು.

ತಾಲೂಕಿನ ಸುಕ್ಷೇತ್ರ ಬಳಗಾನೂರಿನಲ್ಲಿ ಮೌನ ತಪಸ್ವಿ, ಘನ ಮೌನಿ ಲಿಂ.ಶ್ರೀ ಚನ್ನವೀರ ಶರಣರ ಕೃಪಾಶೀರ್ವಾದಿಂದ ಶ್ರೀ ಶಿವಶರಣೆ ಇಟಗಿ ಭೀಮಾಂಬಿಕಾ ತಾಯಿಯ ಮೂರ್ತಿ ಪ್ರತಿಷ್ಠಾಪನೆ, ದೇವಸ್ಥಾನ ಉದ್ಘಾಟನೆ, ಕಳಸಾರೋಹಣ, ನವಗ್ರಹ ಮೂರ್ತಿಗಳ ಪ್ರತಿಷ್ಠಾಪನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀ ಶಿವಕುಮಾರ ಸ್ವಾಮಿಜಿ, ಕರ್ಜಗಿಯ ಶಂಕರ ಕಾರಡಗಿ, ವೇ.ಮೂ. ಚನ್ನಯ್ಯ ಶಾಂತಯ್ಯನಮಠ, ನಿವೃತ್ತ ಶಿಕ್ಷಕ ಕೆ.ಬಿ. ಕಂಬಳಿ, ಕುರಡಗಿಯ ರುದ್ರಮುನಿ ಶಾಸ್ತ್ರೀಗಳು, ಮಲ್ಲಾಪುರ ಗ್ರಾಮದ ಬಸಯ್ಯ ಶಾಸ್ತ್ರೀಗಳು, ಡಾ.ಹನುಮಂತಗೌಡ ಆರ್.ಕಲ್ಮನಿ, ಶ್ರೀ ಭೀಮಾಂಬಿಕಾ ತಾಯಿ ಸೇವಾ ಸಮಿತಿಯ ಅಧ್ಯಕ್ಷರು, ಪದಾಧಿಕಾರಿಗಳು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಶಿಕ್ಷಕ ಎಸ್.ಎಸ್. ಚಟ್ರಿ ಸ್ವಾಗತಿಸಿದರು. ವಿ.ಬಿ. ಕರಮುಡಿ ಪ್ರಸ್ತಾವಿಕವಾಗಿ ಮಾತನಾಡಿದರು. ಶಿವಲಿಂಗಯ್ಯ ಶಾಸ್ತ್ರೀ ಕಾರ್ಯಕ್ರಮ ನಿರೂಪಿಸಿದರು. ಗ್ರಾಮದ ನಾಗರಿಕರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸದ್ಭಕ್ತರು ಉಪಸ್ಥಿತರಿದ್ದರು.

### 'ನಮ್ಮ ನಡೆ-ಮತಗಟ್ಟೆ ಕಡೆಗೆ' ಜಾಗೃತಿ ಅಭಿಯಾನ ಏ.28ಕ್ಕೆ: ಭರತ್.ಎಸ್

# ಶೇಕಡಾವಾರು ಮತದಾನ ಹೆಚ್ಚಳಕ್ಕೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮತದಾನದ ಮಹತ್ವ, ಮತದಾನದ ಮೌಲ್ಯ ಹಾಗೂ ನೈತಿಕ ಮತದಾನದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಗದಗ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಈಗಾಗಲೇ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆ ದಿಸೆಯಲ್ಲಿ ಏಪ್ರಿಲ್ 28ರಂದು 'ನಮ್ಮ ನಡೆ-ಮತಗಟ್ಟೆ ಕಡೆಗೆ' ಕಾರ್ಯಕ್ರಮವನ್ನು ರಾಷ್ಟ್ರೀಯ ಹಬ್ಬದ ಮಾದರಿಯಲ್ಲಿ ಹಮ್ಮಿಕೊಳ್ಳಲು ಅಗತ್ಯ ತಯಾರಿ ಮಾಡಿಕೊಳ್ಳುವಂತೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಎಸ್.ಭರತ್ ಸೂಚಿಸಿದ್ದಾರೆ.

ನಗರದ ಕೇಸ್ವಾನ್ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸ್ವೀಪ್ ಸಮಿತಿಯ ಅಧಿಕಾರಿಗಳ ಜೊತೆ ಸಂವಾದ ನಡೆಸಿ, ಏಪ್ರಿಲ್ 28ರಂದು 'ನಮ್ಮ ನಡೆ-ಮತಗಟ್ಟೆ ಕಡೆಗೆ' ಕಾರ್ಯಕ್ರಮದ ಸಂದರ್ಭದಲ್ಲಿ ತಮ್ಮ ತಮ್ಮ ವ್ಯಾಪ್ತಿಯಲ್ಲಿ ಮತಗಟ್ಟೆಗಳನ್ನು ಪರಿಚಯಿಸುವ ಕೆಲಸ ಆಗಬೇಕು ಎಂದು ಎಸ್. ಭರತ್ ಅವರು ಸಲಹೆ ನೀಡಿದರು.




ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸ್ಥಳೀಯ ಸಂಸ್ಥೆಗಳು ಹೀಗೆ ಎಲ್ಲರೂ ಕೈಜೋಡಿಸಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವುದರ ಮೂಲಕ ಜಿಲ್ಲೆಯಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಶ್ರಮಿಸಬೇಕು ಎಂದು ಭರತ್.ಎಸ್ ಅವರು ಸೂಚಿಸಿದರು.

ಜಿಲ್ಲೆಯಲ್ಲಿ 961 ಮತಗಟ್ಟೆ ಕೇಂದ್ರಗಳಿದ್ದು, ಅಗತ್ಯ ಮೂಲಸೌಲಭ್ಯಗಳ ಬಗ್ಗೆ ಮತ್ತೊಮ್ಮೆ ಖಾತರಿಪಡಿಸಿಕೊಳ್ಳಬೇಕು. ಲೋಕಸಭಾ ಸಾರ್ವತ್ರಿಕ ಚುನಾವಣೆ-2019ರಲ್ಲಿ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರವಾರು ಕಡಿಮೆ ಮತದಾನವಾಗಿರುವ ಮತಗಟ್ಟೆಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಕೆಲಸವಾಗಬೇಕು. ನಗರ/ಗ್ರಾಮೀಣ ಮತಗಟ್ಟೆ ಮತದಾನದ ಅರಿವು ಮೂಡಿಸುವ ಕಾರ್ಯಕ್ರಮಗಳ ಆಯೋಜನೆ ಮಾಡುವಂತೆ ಭರತ್.ಎಸ್ ಅವರು ಹೇಳಿದರು.

ತಾಲೂಕು ಮಟ್ಟದ ಕಾರ್ಯಕ್ರಮ ಆಯೋಜನೆ ಸಂಬಂಧ ಕೂಡಲೇ ಪಟ್ಟಿ ವಿವರ ನೀಡುವಂತೆ ತಾಲೂಕು ಪಂಚಾಯತ್ ಇಓಗಳಿಗೆ ಸೂಚಿಸಿದ ಅವರು, ಕಾರ್ಯಕ್ರಮ ಆಯೋಜನೆ ಸಂಬಂಧ ಹತ್ತಿರದ ಪೊಲೀಸ್ ಠಾಣೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಮಾಹಿತಿ ನೀಡಬೇಕು. ಎಲ್ಲ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿ, ಎಲ್ಲ ಇಲಾಖೆಗಳ ಸಹಕಾರ ಪಡೆದು ಕಾರ್ಯಕ್ರಮ ಆಯೋಜನೆಗೆ ಮುಂದಾಗಬೇಕು ಎಂದರು.

ಜಿ.ಪಂ ಉಪಕಾರ್ಯದರ್ಶಿ ಹಾಗೂ ಸ್ವೀಪ್ ಸಮಿತಿ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ. ದೇವರಮನಿ ಅವರು ಸ್ವೀಪ್ ಸಮಿತಿ ವತಿಯಿಂದ ಏರ್ಪಡಿಸಲಾಗಿರುವ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಹಲವು ಮಾಹಿತಿ ನೀಡಿದರು.

ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಅಮಿನಸಾಬ್ ಅತ್ತಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎನ್. ಕುರ್ತಕೋಟಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಪಿ.ವೈ. ಶೆಟ್ಟೆಪ್ಪನವರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಬಸವರಾಜ ಬೊಮ್ಮಾಯಿ ನಾಮಪತ್ರ ಸಲ್ಲಿಕೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಏ.19ರಂದು ಬೆಳಿಗ್ಗೆ 11 ಗಂಟೆಗೆ ಹಾವೇರಿ ನಗರದ ಐತಿಹಾಸಿಕ ಹುಕ್ಕೇರಿ ಮಠದಿಂದ ಜೆಪಿ ಸರ್ಕಲ್‌ವರೆಗೆ ಬೃಹತ್ ಮೆರವಣಿಗೆಯ ಮೂಲಕ ತೆರಳಿ ಹಾವೇರಿಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ.



ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಯುವ ನಾಯಕ ಅನಿಲ ಮೆಣಸಿನಕಾಯಿ ಸೇರಿದಂತೆ ಪಕ್ಷದ ನಾಯಕರು ಭಾಗವಹಿಸಲಿದ್ದಾರೆ.

ಗದಗ ಜಿಲ್ಲೆಯಿಂದ ಪಕ್ಷದ ಕಾರ್ಯಕರ್ತರು, ಹಿರಿಯರು, ಹಿತೈಷಿಗಳು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧ್ಯಕ್ಷ ರಾಜು ಕುರಡಗಿ, ವಕ್ತಾರರಾದ ಎಂ.ಎಂ. ಹಿರೇಮಠ ವಿನಂತಿಸಿದ್ದಾರೆ.

# ಪ್ರಶ್ನೆಗೆ ಉತ್ತರಿಸಿ, ರಾಜ್ಯ ಪ್ರವಾಸ ಮಾಡಿ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಸುಳ್ಳು ಗ್ಯಾರಂಟಿಗಳನ್ನು ನೀಡಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷದ ಆಡಳಿತ ನಡೆಸುವಲ್ಲಿ ಸಂಪೂರ್ಣ ಕುಸಿದಿದ್ದು, ನಾವು ಕೇಳುವ ಪ್ರಶ್ನೆಗಳಿಗೆ ಉತ್ತರ ಕೊಡಿ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಹಾಗೂ ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ರಾಹುಲ್ ಗಾಂಧಿಯವರಿಗೆ ಒತ್ತಾಯಿಸಿದ್ದಾರೆ.

ಅವರು ಪಕ್ಷದ ಕಾರ್ಯಾಲಯದಲ್ಲಿ ಗುರುವಾರ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾಗಿ 11 ತಿಂಗಳು ಕಳೆದರೂ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಆರ್ಥಿಕವಾಗಿ ರಾಜ್ಯ ಸರ್ಕಾರ ದಿವಾಳಿಯಾಗಿದೆ. ವರ್ಗಾವಣೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದೆ. ರಾಜ್ಯದಲ್ಲಿ 692 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಇದರ ಹೊಣೆ ಹೊರುತ್ತೀರಾ ಎಂದು ರಾಹುಲ್ ಗಾಂಧಿಯವರನ್ನು ಪ್ರಶ್ನಿಸಿದ್ದಾರೆ.

ಗ್ಯಾರಂಟಿ ಹೆಸರಿನಲ್ಲಿ ಬೆಲೆ ಏರಿಕೆ, ವಿದ್ಯುತ್ ದರ ಹೆಚ್ಚಳ, ಸ್ಟ್ಯಾಂಪ್ ಡ್ಯೂಟಿ ದರ ಹೆಚ್ಚಳ ಮಾಡಲಾಗಿದೆ. ಈ ಎಲ್ಲ ಪ್ರಶ್ನೆಗಳಿಗೆ ಉತ್ತರ ನೀಡಿ ನಂತರ ಕರ್ನಾಟಕದಲ್ಲಿ ಪ್ರವಾಸ ಮಾಡಿ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಪ್ರಧಾನ ಕಾರ್ಯದರ್ಶಿ ಪಕ್ಕಿರೇಶ ರಟ್ಟಿಹಳ್ಳಿ, ನಗರ ಅಧ್ಯಕ್ಷ ಅನಿಲ ಅಬ್ಬಿಗೇರಿ, ಮಾಧ್ಯಮ ಪ್ರಮುಖ ರಾಜು ಹೊಂಗಲ ಒತ್ತಾಯಿಸಿದ್ದಾರೆ.

# ಕಡ್ಡಾಯ ಮತದಾನ ನಮ್ಮೆಲ್ಲರ ಜವಾಬ್ದಾರಿ




■ವಿಜಯಸಾಕ್ಷಿ ಸುದ್ದಿ, ಡಂಬಳ

ಮತದಾನ ಸಂವಿಧಾನ ನಮಗೆ ನೀಡಿದ ವರದಾನ. ಅಂತಹ ಅತ್ಯಮೂಲ್ಯ ಹಕ್ಕನ್ನು ತಪ್ಪದೇ ಚಲಾಯಿಸುವುದು ಎಲ್ಲರ ಜವಾಬ್ದಾರಿ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಸಮನಿ ಹೇಳಿದರು.


ಡಂಬಳ ಗ್ರಾಮದ ಹೊರವಲಯದಲ್ಲಿನ ನರೇಗಾ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಕಾಮಗಾರಿ ಪರಿಶೀಲಿಸಿದ ನಂತರ ಮತದಾನ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವ ಗಟ್ಟಿಗೊಳ್ಳಬೇಕಾದರೆ ಎಲ್ಲರೂ ತಪ್ಪದೇ ಮತ ಚಲಾಯಿಸಬೇಕು. ಸ್ವಯಂ ಪ್ರೇರಣೆಯಿಂದ ಎಲ್ಲರೂ ನಿಮ್ಮ ನಿಮ್ಮ ನೆರೆಹೊರೆಯವರಲ್ಲೂ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.

ನರೇಗಾ ಕೂಲಿ ಮೊತ್ತ ಈಗ 349 ರೂ.ಗೆ ಹೆಚ್ಚಳವಾಗಿದೆ. ಅಳತೆಗೆ ತಕ್ಕಂತೆ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಎಲ್ಲರೂ ಶ್ರಮಿಸಬೇಕು. ಸಾಮೂಹಿಕ ಬದು ನಿರ್ಮಾಣ ಕಾಮಗಾರಿಯಿಂದ ಮಣ್ಣಿನ ಫಲವತ್ತತೆ ಹೆಚ್ಚಳವಾಗಿ, ಮಣ್ಣಿನ ಸವಕಳಿ ತಡೆಗಟ್ಟಲು ನೆರವಾಗುತ್ತದೆ. ಇದರಿಂದ ರೈತರಿಗೆ ಅನುಕೂಲ ಎಂದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರಮೋದ ತುಂಬಳ, ಪಿಡಿಓ ಶಶಿಧರ ಹೊಂಬಳ, ಟಿಸಿ ಹರೀಶ ಸೊಬರದ ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

# ಮತದಾನ ನಮ್ಮೆಲ್ಲರ ಆದ್ಯ ಕರ್ತವ್ಯ




■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

18 ವರ್ಷ ಮೇಲ್ಪಟ್ಟ, ಮತದಾರರ ಪಟ್ಟಿಯಲ್ಲಿರುವ ಎಲ್ಲ ಅರ್ಹ ಮತದಾರರು ಮತದಾನದಿಂದ ಹೊರಗುಳಿಯಬಾರದೆನ್ನುವ ಉದ್ದೇಶದಿಂದ ಅವರಲ್ಲಿ ಮತದಾನದ ಮಹತ್ವವನ್ನು ತಿಳಿಸುವುದಕ್ಕಾಗಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಹೇಳಿದರು.

ಅವರು ಗುರುವಾರ ಪ.ಪಂ ವತಿಯಿಂದ ಎಲ್ಲ ಸಿಬ್ಬಂದಿಗಳೊಂದಿಗೆ ಕಚೇರಿಯ ಪ್ರಚಾರ ವಾಹನದ ಮೂಲಕ ಜನದಟ್ಟಣೆಯಿರುವ ಪ್ರದೇಶ ಹಾಗೂ ಪ್ರಮುಖ ಬೀದಿಗಳಲ್ಲಿ ಜಾಗೃತಿಯನ್ನು ಮೂಡಿಸಿ ಮಾತನಾಡಿದರು.

ಇಡೀ ಜಗತ್ತಿನಲ್ಲಿಯೇ ಬೃಹತ್ ಲಿಖಿತ ಸಂವಿಧಾನ ನಮ್ಮದಾಗಿದ್ದು, ಈ ಸಂವಿಧಾನವು ನಮಗೆ ನೀಡಿದ ಮತದಾನದ ಅಧಿಕಾರವನ್ನು ಚಲಾಯಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಒಂದೊಂದು ಮತವು ಕೂಡಾ ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಸಾಕ್ಷಿಯಾಗಲಿದೆ. ಆದ್ದರಿಂದ ಯಾವುದೇ ಆಮಿಷಗಳಿಗೆ ಒಳಪಡದೇ ನಿರ್ಭಯವಾಗಿ ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲ ಅರ್ಹರೂ ಮತದಾನ ಮಾಡಬೇಕು. ಈ ಬಗ್ಗೆ ಜಿಲ್ಲಾ ಹಾಗೂ ತಾಲೂಕಾಡಳಿತದ ಹಂತದಲ್ಲಿ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ಮುಖ್ಯೋಪಾಧ್ಯಾಯ ಜಿ.ಡಿ. ಈರಕ್ಕನವರ ಮತ್ತು ಪ.ಪಂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ಷಟ್‌ಸ್ಥಲ್ ಧ್ವಜಾರೋಹಣ ನೆರವೇರಿಸಿದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಅಕ್ಕನ ವಚನಗಳಿಂದ ಜೀವನೋನ್ನತಿ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯನ ದುಃಖಕ್ಕೆ ಮನಸ್ಸೇ ಕಾರಣ. ಎಲ್ಲಾ ಇಂದ್ರಿಯಗಳಿಗೂ ಚೇತನ ನೀಡುವುದರ ಮೂಲಕ ಮನಸ್ಸೇ ಇಂದ್ರಿಯಗಳಿಗೆ ಮೂಲವಾಗಿದೆ. ನಮ್ಮಲ್ಲಿರುವ ಮನಸ್ಸನ್ನು ಭಗವಂತನಲ್ಲಿ ನೆಲೆಗೊಳಿಸಬೇಕು. ಭಗವಂತನ ಚಿಂತನೆಯನ್ನು ಮಾಡುತ್ತ, ಶರಣಾಗತಿ ಭಾವವನ್ನು ಹೊಂದಿದಾಗ ಮಾತ್ರ ಮೋಕ್ಷವನ್ನು ಸಂಪಾದಿಸಬಹುದು. ಅಕ್ಕನ ವಚನಗಳನ್ನು ಮತ್ತೆ ಮತ್ತೆ ಓದುವುದರ ಜೊತೆಯಲ್ಲಿ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರಿಂದ ಜೀವನ ಉನ್ನತಿ ಪಡೆಯಬಹುದೆಂದು ಶ್ರೀ ಮ.ನಿ.ಪ್ರ. ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಅಕ್ಕನ ಬಳಗದಲ್ಲಿ ಅಕ್ಕನ ಜಯಂತಿ ಉತ್ಸವದ ನಿಮಿತ್ತ ನಡೆಯುತ್ತಿರುವ ಮೊದಲನೇ ದಿನದ ಕಾರ್ಯಕ್ರಮದಲ್ಲಿ ಷಟ್‌ಸ್ಥಲ್ ಧ್ವಜಾರೋಹಣ ನೆರವೇರಿಸಿ ಶ್ರೀಗಳು ಆಶೀರ್ವಚನದಲ್ಲಿ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.



ಶಿವಲೀಲಾ ಹಿರೇಮಠ ಪ್ರಾರ್ಥಿಸಿದರು. ಅಕ್ಕನ ಬಳಗದ ಅಧ್ಯಕ್ಷೆ ಲಲಿತಾ ವಿ.ಬಾಳಿಹಳ್ಳಿಮಠ ಸ್ವಾಗತಸಿದರು. ಕಾರ್ಯದರ್ಶಿ ರೇಣುಕಾ ಎಲ್. ಅಮಾತ್ಯ ವಂದಿಸಿದರು. ಜಯಲಕ್ಷ್ಮೀ ವಿ.ಬಳ್ಳಾರಿ ಕಾರ್ಯಕ್ರಮ ಸಂಯೋಜಿಸಿದರು. ಪ್ರೇಮಾ ಬಿ.ಮೇಟಿ ನಿರೂಪಿಸಿದರು. ಖ್ಯಾತ ಹಿಂದೂಸ್ತಾನಿ ಗಾಯಕಿ ಪಾರ್ವತಿ ವಿ.ಮಾಳೆಕೊಪ್ಪಮಠ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಅನ್ನಪೂರ್ಣ ಮಾಳೆಕೊಪ್ಪಮಠ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಪವಿತ್ರಾ ಬಿರಾದಾರ ಪ್ರಸಾದದ ಭಕ್ತಿ ಸೇವೆಯನ್ನು ವಹಿಸಿಕೊಂಡಿದ್ದರು.

ಶಿವಲೀಲಾ ಕುರುಡಗಿ, ಕಸ್ತೂರಿ ಹಿರೇಗೌಡರ, ಸುಜಾತಾ ಮಾನ್ವಿ, ಶಾರದಾ ಹಿರೇಮಠ, ರೇಖಾ ಶಿಗ್ಲಿಮಠ, ದೀಪಾ ಪಟ್ಟಣಶೆಟ್ಟಿ, ಶ್ರೇಯಾ ಪವಾಡಶೆಟ್ಟರ್, ಸರೋಜಕ್ಕ ಮಾನ್ವಿ, ಜಯಶ್ರೀ ಬಾಳಿಹಳ್ಳಿಮಠ, ವಿದ್ಯಾ ಧಡಿ, ಸುಜಾತಾ ಹಿರೇಮಠ, ಶಶಿಕಲಾ ಹಿರೇಮಠ, ಸುವರ್ಣ ಮದರಿಮಠ ಮುಂತಾದವರು ಪಾಲ್ಗೊಂಡಿದ್ದರು.

12ನೇ ಶತಮಾನದಲ್ಲಿ ದೊರೆತ ಸ್ವಾತಂತ್ರ್ಯವನ್ನು ಅನುಭವಿಸಿದ ಮಹಿಳಾ ಶ್ರೇಷ್ಠ ಶಿವಶರಣೆ ಅಕ್ಕಮಹಾದೇವಿ, ಮಹಿಳಾ ಸಾಧಕರಲ್ಲಿ ಶ್ರೇಷ್ಠ ಸ್ಥಾನವನ್ನು ಪಡೆದ ಮಹಿಳೆ ತನ್ನ ಬದುಕನ್ನು ಮಾತ್ರ ಸಾರ್ಥಕಪಡಿಸಿಕೊಳ್ಳದೇ ಆತ್ಮಕಲ್ಯಾಣದ ಜೊತೆಗೆ ಸಮಾಜದ ಕಲ್ಯಾಣ ಸಾಧಿಸಿರುವ ಮಹಾಜ್ಞಾನಿ, ಚಿಕ್ಕವಯಸ್ಸಿನಲ್ಲಿಯೇ ಹೆಚ್ಚಿನ ಜ್ಞಾನವನ್ನು ಪಡೆದ ಮಹಿಳೆ, ಅದ್ಭುತವಾದ ಕವಿತಾ ಶಕ್ತಿ ಇರುವ, ಭಾರತ ಭೂಮಿಯ ಮೊಟ್ಟ ಮೊದಲ ಮಹಿಳಾ ಕವಿಯತ್ರಿಯೂ ಹೌದು. ಅಕ್ಕನ ವಚನಗಳಲ್ಲಿ ಮೌಲ್ಯ ತುಂಬಿರುತ್ತಿತ್ತು ಎಂದು ಶ್ರೀಗಳು ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka